ಸಂಪುಟ : 9 ಸಂಚಿಕೆ 132 ಪುಟ : 4 ಬೆಲೆ: 3.00 ಶುಕ್ರವಾರ ಜೂನ್ 28 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 9 Issue : 132 Pages : 4 Price : 3.00 Friday June 28 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಜೂನ್ 28ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ : ವಾರ್ಡ್ ನಂ. 6ರಲ್ಲಿ ಸಿದ್ಧಲಿಂಗನಗರ, ರೊಟ್ಟಿಯವರ ಲೈನ್, ನಾವಳ್ಳಿಯವರ ಲೈನ್, ರಡ್ಡಿಯವರ ಲೈನ್, ಪಿಪಿ ಗುಡಿ ಲೈನ್ ಹಿಂದಿನ ಭಾಗ, ಅಂಬೇಡ್ಕರ್ ನಗರ, ಹೂಲಿಯವರ ಲೈನ್, ಕೆಲವು ಉಳಿದ ಭಾಗಗಳು. ವಾರ್ಡ್ ನಂ. 29ರಲ್ಲಿ ಶಿಕ್ಷಕರ ಬಡಾವಣೆ, ಕೆಲವು ಉಳಿದ ಭಾಗಗಳು.

ವಾರ್ಡ್ ನಂ. 15, 17ಶಹಪೂರ ಪೇಟೆ, ಜವಳಗಲ್ಲಿ, ಮೀನದ ಮಾರ್ಕೆಟ್, ಬಸವೇಶ್ವರ ಗುಡಿ ಲೈನ್, ಕನ್ನಡ ಶಾಲೆ ಲೈನ್, ಮಹೇಂದ್ರಕರ ಸರ್ಕಲ್, ಗಾಂಧಿ ಸರ್ಕಲ್, ಡಿ.ಸಿ.ಮಿಲ್ ರೋಡ್, ಭಜಂತ್ರಿ ಓಣಿ, ಗಣಪತಿಗುಡಿ ಲೈನ್, ಶುದ್ಧ ಕುಡಿಯುವ ನೀರಿನ ಘಟಕದ ಲೈನ್, ಕೆಲವು ಉಳಿದ ಭಾಗಗಳು.

ವಾರ್ಡ್ ನಂ. 26ರಲ್ಲಿ ಅಬ್ಬಿ ಗೇರಿ ಕಾಂಪೌಂಡ್ ಲೈನ್, ಸಾಲಮನೆ, ಮಕಾನಗಲ್ಲಿ, ಉಡಚಮ್ಮನಗುಡಿ ಲೈನ್, ತೆಗ್ಗಿನ ಲಾಟ್, ಉರ್ದು ಶಾಲೆ, ಕಮ್ಮಾರ ಸಾಲ್, ಹಳೇ ಡಿ.ಸಿ.ಆಫೀಸ್ ಲೈನ್, ಉಳಿದ ಭಾಗಗಳು,

ವಾರ್ಡ್ ನಂ. 21, 20, 19ರಲ್ಲಿ ಖಾನತೋಟ, ಪಡಗದ ಭಾಗ-1,2, ಕುಂಬಾರ ಓಣಿ ಭಾಗ-1,2 ಜಂತ್ಲಿಯವರ ಲೈನ್, ಭಾಗ-1,2. ವಾರ್ಡ್ ನಂ. 29ರಲ್ಲಿ ಬನ್ನಿಕಟ್ಟಿ ಲೈನ್, ಪಾಡೆ ಲೈನ್, ಮೆಂಬರ್ ಲೈನ್, ಡಂಬಳದವರ ಲೈನ್,

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಈ ಮೂಲಕ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜುಲೈ 13ಕ್ಕೆ ರಾಷ್ಟ್ರೀಯ ಲೋಕ ಅದಾಲತ್

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಇವರ ಆದೇಶದನ್ವಯ ಗದಗ ಜಿಲ್ಲೆಯಲ್ಲಿ ಜುಲೈ 13ರಂದು ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಂಡಿದೆ.

ಸಾರ್ವಜನಿಕರು, ಪಕ್ಷಗಾರರು ತಮ್ಮ ವ್ಯಾಜ್ಯಗಳನ್ನು ಪರಸ್ಪರ ರಾಜೀ ಸಂಧಾನ ಮಾಡಿಕೊಳ್ಳುವ ಮೂಲಕ ತ್ವರಿತವಾಗಿ ಇತ್ಯರ್ಥಪಡಿಸಿಕೊಳ್ಳಲು ಇದೊಂದು ಸುವರ್ಣಾವಕಾಶವಾಗಿದೆ. ರಾಜೀ ಸಂಧಾನದಲ್ಲಿ ಪಾಲ್ಗೊಂಡು ತಮಗಾಗುವ ಆರ್ಥಿಕ ಹೊರೆ ಹಾಗೂ ಸಮಯ ಪೋಲಾಗುವುದನ್ನು ತಪ್ಪಿಸಲು, ಮೊದಲಿನ ಬಾಂಧವ್ಯ ಉಳಿಸಿಕೊಳ್ಳಲು ತಮ್ಮ ವ್ಯಾಜ್ಯಗಳನ್ನು ಇತ್ಯರ್ಥಪಡಿಸಿಕೊಳ್ಳುವಂತೆ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಗದಗ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷರಾದ ಬಸವರಾಜ ತಿಳಿಸಿದ್ದಾರೆ.

ಗದಗ ಜಿಲ್ಲೆಯಲ್ಲಿ ರಾಜೀ ಸಂಧಾನಕ್ಕಾಗಿ ಸಿವಿಲ್ ದಾವೆಗಳು, ಭೂಸ್ವಾಧೀನ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ದರಖಾಸ್ತು ಅರ್ಜಿಗಳು, ಕಾರ್ಮಿಕ ಪ್ರಕರಣಗಳು, ಎಮ್.ಎಮ್.ಆರ್.ಡಿ ಪ್ರಕರಣಗಳು, ಚೆಕ್‌ಬೌನ್ಸ್ ಪ್ರಕರಣಗಳು, ಮೋಟಾರು ವಾಹನ ಅಪಘಾತ ಪ್ರಕರಣಗಳು, ವೈವಾಹಿಕ ಪ್ರಕರಣಗಳು ಹಾಗೂ ರಾಜೀ ಆಗಲು ಅರ್ಹವಿರುವ ಕ್ರಿಮಿನಲ್ ಕಂಪೌಂಡೆಬಲ್ ಪ್ರಕರಣಗಳು ಸೇರಿದಂತೆ ಹಲವಾರು ಪ್ರಕರಣಗಳನ್ನು ರಾಜೀಗಾಗಿ ಗುರುತಿಸಲಾಗಿದೆ.

ಪ್ರತಿದಿನ ರಾಜೀಗಾಗಿ ಆಯ್ಕೆ ಮಾಡಿದ ಪ್ರಕರಣಗಳನ್ನು ಸಂಬಂಧಪಟ್ಟ ವಕೀಲರು ಹಾಗೂ ಪಕ್ಷಗಾರರೊಂದಿಗೆ ಮುಂಚಿತವಾಗಿಯೇ ರಾಜೀ ಸಂಧಾನದಿಂದ ಆಗುವ ಪ್ರಯೋಜನಗಳ ಬಗ್ಗೆ ತಿಳಿಸಿ, ಅವರ ಮನವೊಲಿಸಿ ರಾಜೀ ಸಂಧಾನ ಮಾಡಿಕೊಳ್ಳಲು ತಿಳಿಯಪಡಿಸಲಾಗುವುದು. ಪ್ರಕರಣಗಳಿಗೆ ಸಂಬಂಧಪಟ್ಟ ವಕೀಲರು, ಕಕ್ಷಿದಾರರು ಹಾಗೂ ವಿವಿಧ ಇಲಾಖೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳು, ಇಲಾಖೆಗಳವರು ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನ ಮೂಲಕ ಪರಿಹರಿಸಿಕೊಳ್ಳುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪುರಸಭೆ ವ್ಯಾಪ್ತಿಯಲ್ಲಿನ ಬಡತನ ರೇಖೆಗಿಂತ ಕೆಳಗಿರುವ ಕುಟುಂಬಗಳಿಗೆ 2024-25ನೇ ಸಾಲಿನ ರಾಷ್ಟ್ರೀಯ ನಗರ ಜೀವನೋಪಾಯ ರಾಜ್ಯ ಅಭಿಯಾನ ಯೋಜನೆಯಡಿ ವಿವಿಧ ಉಪಘಟಕದಡಿ ಸ್ವಯಂ ಉದ್ಯೋಗ ಕಾರ್ಯಕ್ರಮಕ್ಕೆ ಬಡ್ಡಿ ಸಹಾಯಧನ, ಸ್ವ-ಸಹಾಯ ಗುಂಪು ರಚನೆ ಹಾಗೂ ಬ್ಯಾಂಕ್ ಲಿಂಕೇಜ್‌ಗೆ ಗುರಿ ನಿಗದಿಪಡಿಸಲಾಗಿದೆ.

18ರಿಂದ 45 ವರ್ಷ ವಯೋಮಿತಿಯುಳ್ಳ ಅಸಕ್ತರು ಅರ್ಜಿ ಸಲ್ಲಿಸಬಹುದು. ಈ ಹಿಂದೆ ಪುರಸಭೆ ವತಿಯಿಂದ ಸದರಿ ಯೋಜನೆಯಡಿ ಸೌಲಭ್ಯ ಪಡೆದಿರಬಾರದು. ಅರ್ಜಿಯನ್ನು ಸಲ್ಲಿಸಲು ಜುಲೈ 15 ಕೊನೆಯ ದಿನವಾಗಿದ್ದು ಹೆಚ್ಚಿನ ಮಾಹಿತಿಗಾಗಿ ಲಕ್ಷ್ಮೇಶ್ವರ ಪುರಸಭೆ ಡೇನಲ್ಮ್ ವಿಭಾಗದಲ್ಲಿ ಪಡೆಯಬಹುದಾಗಿದೆ.



ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ್ ಬೊಮ್ಮಾಯಿ ಗುರುವಾರ ನವದೆಹಲಿಯಲ್ಲಿ ಸಿಎಂ ಸಿದ್ದರಾಮಯ್ಯ ಅವರೊಂದಿಗೆ ಉಭಯ ಕುಶಲೋಪರಿ ನಡೆಸಿದರು. ಈ ಸಂದರ್ಭದಲ್ಲಿ ಗೃಹ ಸಚಿವ ಡಾ. ಜಿ. ಪರಮೇಶ್ವರ ಹಾಜರಿದ್ದರು.

### ಧಾರವಾಡ ಕೃಷಿ ವಿಶ್ವವಿದ್ಯಾಲಯದ 37ನೇ ಘಟಿಕೋತ್ಸವದಲ್ಲಿ ಸಚಿವ ಚಲುವರಾಯಸ್ವಾಮಿ ಕರೆ

## ತಾಂತ್ರಿಕ ಜ್ಞಾನದೊಂದಿಗೆ ಕೃಷಿ ಆವಿಷ್ಕಾರಗಳಾಗಲಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಕೃಷಿ ಪದವೀಧರರು ತಮ್ಮ ತಾಂತ್ರಿಕ ಜ್ಞಾನ ಬಳಸಿ ನಾಡಿನ ಸರ್ವತೋಮುಖ ಏಳಿಗೆಗೆ ಶ್ರಮಿಸಬೇಕು ಎಂದು ಕೃಷಿ ಸಚಿವರಾದ ಎನ್.ಚಲುವರಾಯಸ್ವಾಮಿ ಕರೆ ನೀಡಿದರು.

ಧಾರವಾಡ ಕೃಷಿ ವಿಶ್ವವಿದ್ಯಾಲಯದ 37ನೇ ಘಟಿಕೋತ್ಸವದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕೃಷಿ ಪದವೀಧರರು ಉದ್ಯೋಗ ಅರಸುವ ಬದಲು ಕೆಲಸ ನೀಡುವವರಾಗಿ ಬೆಳೆಯಬೇಕು. ಕೃಷಿ ಕ್ಷೇತ್ರದಲ್ಲಿ ಮೌಲ್ಯವರ್ಧನೆ ಹಾಗೂ ಅಭಿವೃದ್ಧಿಗೆ ವ್ಯಾಪಕ ಅವಕಾಶ ಇದೆ. ಕೃಷಿ ಪದವೀಧರರು ತಮ್ಮ ಕೌಶಲ್ಯವನ್ನು ಈ ಕ್ಷೇತ್ರದ ವಿಕಾಸಕ್ಕೆ ಬಳಸಬೇಕು ಎಂದು ಸಲಹೆ ನೀಡಿದರು.

ಧಾರವಾಡ ಕೃಷಿ ವಿ.ವಿ ದೇಶದ ಶ್ರೇಷ್ಠ

> ಧಾರವಾಡದ ಕೃಷಿ ವಿ.ವಿಯ 37ನೇ ಘಟಿಕೊತ್ಸವದಲ್ಲಿ 69 ಪಿ.ಹೆಚ್.ಡಿ, 237 ಸ್ನಾತಕೋತ್ತರ ಹಾಗೂ 627 ಸ್ನಾತಕ ಪದವಿ ಸೇರಿದಂತೆ 933 ಅಭ್ಯರ್ಥಿಗಳಿಗೆ ಪದವಿ ಪ್ರಧಾನ ಮಾಡಲಾಗಿದೆ. 57 ಚಿನ್ನದ ಪದಕ ಹಾಗೂ 99 ನಗದು ಬಹುಮಾನ ನೀಡಲಾಗಿದೆ. ಈ ಗೌರವಕ್ಕೆ ಪಾತ್ರವಾಗಿರುವ ಎಲ್ಲರಿಗೂ ಅಭಿನಂದನೆಗಳು. ಅಲ್ಲದೆ, ಈ ವರ್ಷದ ಧಾರವಾಡ ಕೃಷಿ ವಿವಿ ವಿದ್ಯಾರ್ಥಿನಿ ಸೌಭಾಗ್ಯ ಬೀಳಗಿಮಠ ಯು.ಪಿ.ಎಸ್.ಸಿ ಪರೀಕ್ಷೆಯಲ್ಲಿ 101ನೇ ರ್‍ಯಾಂಕ್ ಗಳಿಸಿರುವುದು ರಾಜ್ಯಕ್ಕೆ ಹೆಮ್ಮೆ ತಂದಿದೆ ಎಂದು ಕೃಷಿ ಸಚಿವ ಚಲುವರಾಯಸ್ವಾಮಿ ಮೆಚ್ಚುಗೆ ವ್ಯಕ್ತಪಡಿಸಿದರು.



ವಿಶ್ವವಿದ್ಯಾಲಗಳಲ್ಲಿ ಒಂದಾಗಿದ್ದು, ಹೊಸ ಹೊಸ ಸಂಶೋಧನೆಗಳ ಮೂಲಕ ಕೃಷಿ ಕ್ಷೇತ್ರಕ್ಕೆ ದೊಡ್ಡ ಕೊಡುಗೆ ನೀಡಿರುವುದು ಪ್ರಶಂಸನೀಯ. ವಿಶ್ವವಿದ್ಯಾಲಯಗಳು ರೈತರಿಗೆ ಆತ್ಮವಿಶ್ವಾಸ ತುಂಬುವ ಜೊತೆಗೆ ವೈಜ್ಞಾನಿಕ, ತಾಂತ್ರಿಕ ನೆರವು ಒದಗಿಸಬೇಕು ಎಂದು ಅವರು ಸೂಚನೆ ನೀಡಿದರು.

ರಾಜ್ಯ ಸರ್ಕಾರ ಸದಾ ರೈತರ ಪರವಾಗಿದೆ. ಕೃಷಿ ಕ್ಷೇತ್ರದ ಶ್ರೇಯೋಭಿವೃದ್ಧಿಗೆ ಅನೇಕ ಪರಿಣಾಮಕಾರಿ ಯೋಜನೆ ಜಾರಿಗೆ ತಂದಿದೆ. ಸಿರಿ ಧಾನ್ಯಗಳ ಪ್ರೋತ್ಸಾಹ ಕಾರ್ಯಕ್ರಮಗಳಿಂದ ದೊಡ್ಡ ಯಶಸ್ಸು ಕಾಣುತ್ತಿದೆ. ನೂರಾರು ಹೊಸ ಉದ್ಯಮ ಪ್ರಾರಂಭವಾಗಿ ಹೀಗೆ ಎಲ್ಲಾ ಕೃಷಿ ಉತ್ಪನ್ನಗಳಲ್ಲಿ ಹೊಸ ಆವಿಷ್ಕಾರ ಮತ್ತು ಬ್ರಾಂಡಿಗ್ ಅಗಬೇಕಿದೆ ಎಂದು ಅವರು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ರಾಜ್ಯಪಾಲರಾದ ಥಾವರಚಂದ ಗೊಹ್ಲೋಟ್ ಮಾತನಾಡಿ, ಕೃಷಿ ಕ್ಷೇತ್ರವನ್ನು ಶ್ರೀಮಂತಗೊಳಿಸಲು ಯುವ ವಿಜ್ಞಾನಿಗಳು ಮುಂದಾಗಬೇಕಿದೆ. ಆಧುನಿಕ ಕಾಲದಲ್ಲಿ ವಿವಿಧ ಮಾಲಿನ್ಯದ ನಡುವೆ ನೈಸರ್ಗಿಕ ಹಾಗೂ ಸಾವಯವ ಕೃಷಿಗೆ ಹೆಚ್ಚು ಒತ್ತು ನೀಡಬೇಕಿದೆಯೆಂದು ಕರೆ ನೀಡಿದರು.

ದೆಹಲಿಯ ಕೃಷಿ ವಿಜ್ಞಾನಿಗಳ ನೇಮಕಾತಿ ಮಂಡಳಿ ಅಧ್ಯಕ್ಷ ಡಾ. ಸಂಜಯ ಕುಮಾರ ಮಾತನಾಡಿ, ಭಾರತವು 2050ಕ್ಕೆ 1.7 ಬಿಲಿಯನ್ ಜನಸಂಖ್ಯೆ ಹೊಂದಲಿದ್ದು, ಸದ್ಯದ ಬೇಡಿಕೆಯ ಶೇ 70ರಷ್ಟು ಕೃಷಿ ಉತ್ಪನ್ನಗಳ ಬೇಡಿಕೆ ಹೆಚ್ಚಲಿದೆ. ಇದನ್ನು ಎದುರಿಸಲು ಕೃಷಿ ಕ್ಷೇತ್ರದಲ್ಲಿ ಹಲವಾರು ಬದಲಾವಣೆ ತರುವ ಅಗತ್ಯವಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ರಾಜ್ಯಪಾಲ ಥಾವರಚಂದ ಗೊಹ್ಲೋಟ್ ಮಾತನಾಡಿ, ಕೃಷಿ ಕ್ಷೇತ್ರವನ್ನು ಶ್ರೀಮಂತಗೊಳಿಸಲು ಯಾವ ವಿಜ್ಞಾನಿಗಳು ಮುಂದಾಗಬೇಕಿದೆ. ಆಧುನಿಕ ಕಾಲದಲ್ಲಿ ವಿವಿಧ ಮಾಲಿನ್ಯದ ನಡುವೆ ನೈಸರ್ಗಿಕ ಹಾಗೂ ಸಾವಯವ ಕೃಷಿಗೆ ಹೆಚ್ಚು ಒತ್ತು ನೀಡಬೇಕಿದೆ ಎಂದು ಕರೆ ನೀಡಿದರು.

> ಧಾರವಾಡ ಕೃಷಿ ವಿಶ್ವವಿದ್ಯಾಲಯ ಶ್ರಿಯಾ ಎಸ್.ಕರಿ ಕೃಷಿ ಪದವಿಯಲ್ಲಿ ಒಟ್ಟು ಮೂರು ಚಿನ್ನದ ಪದಕಗಳನ್ನು ಪಡೆದರು. ಹನಮನಮಟ್ಟಿ ಕೃಷಿ ಮಹಾವಿದ್ಯಾಲಯದ ಕುಮಾರ ಮಾಹಾಂತೇಶ ಹಿರೇಮಠ ಹಾಗೂ ಸಮುದಾಯ ವಿಜ್ಞಾನ ಮಹಾವಿದ್ಯಾಲಯದ ರೋಹಿಣಿ ರಮೇಶ ಭಾವಿಕಟ್ಟಿ ತಲಾ ಎರಡು ಚಿನ್ನದ ಪದಕಗಳನ್ನು ಪಡೆದುಕೊಂಡರು.



### ನಾಡಪ್ರಭು ಶ್ರೀ ಕೆಂಪೇಗೌಡರ ಜಯಂತಿ ಕಾರ್ಯಕ್ರಮದಲ್ಲಿ ಡಿಸಿ ವೈಶಾಲಿ ಎಂ.ಎಲ್

## ಕೆಂಪೇಗೌಡರ ಆದರ್ಶಗಳು ಎಲ್ಲರಿಗೂ ದಾರಿದೀಪ

■ ವಿಜಯಸಾಕ್ಷಿ ಸುದ್ದಿ, ಗದಗ

ಬೆಂಗಳೂರು ನಗರವನ್ನು ಅರ್ಥಪೂರ್ಣವಾಗಿ ಕಟ್ಟುವಲ್ಲಿ ಕೆಂಪೇಗೌಡರ ಕೊಡುಗೆ ಮಹತ್ವದ್ದಾಗಿದೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅಭಿಪ್ರಾಯಪಟ್ಟರು.

ಗದಗ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಗುರುವಾರ ನಾಡಪ್ರಭು ಶ್ರೀ ಕೆಂಪೇಗೌಡರ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಕೆಂಪೇಗೌಡ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು.

ನಾಡಪ್ರಭು ಕೆಂಪೇಗೌಡರು ಸುಭದ್ರವಾದ ಬೆಂಗಳೂರು ನಿರ್ಮಾಣದ ಜೊತೆಯಲ್ಲಿಯೇ ಜನಪರ ಕಾರ್ಯಗಳನ್ನು ಕೈಗೊಂಡರು ಎಂದರು.

ಬಾಲ್ಯದಲ್ಲಯೇ ಚುರುಕಾಗಿದ್ದ ಕೆಂಪೇಗೌಡ ಅವರು ಗುರುಕುಲದಲ್ಲಿ ಸಾಮಾನ್ಯ ಶಿಕ್ಷಣದ ಜೊತೆಗೆ ರಾಜನೀತಿ, ಆರ್ಥಿಕ ತಿಳುವಳಿಕೆ, ಕುಸ್ತಿ, ಯುದ್ಧ ಕಲೆಗಳನ್ನು ಕಲಿತಿದ್ದರು. ವಿಜಯನಗರದ ಧಾರ್ಮಿಕ ಮತ್ತು ಸಾಂಸ್ಕೃತಿಕ ಸಿರಿಯನ್ನು ಕಣ್ಣಾರೆ ಕಂಡಿದ್ದ




ಕೆಂಪೇಗೌಡರಿಗೆ ಎಲ್ಲ ವೈಭವಗಳನ್ನು ಪುನರ್ ಪ್ರತಿಷ್ಠಾಪಿಸುವ ಬಯಕೆ ಇತ್ತು. ಅವರು ರಾಜಧಾನಿ ಕಟ್ಟಿದ ನಂತರ ಅಲ್ಲಿ 4 ಮಹಾದ್ವಾರಗಳನ್ನು ರಚಿಸಿದರು. ವ್ಯಾಪಾರಿಗಳಿಗೆ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಿಕೊಟ್ಟು, ಅವರ ವೃತ್ತಿಗಳಿಗನುಸಾರವಾಗಿ ಅಕ್ಕಿಪೇಟೆ, ರಾಗಿ ಪೇಟೆ, ಕುಂಬಾರ ಪೇಟೆ, ಉಪ್ಪಾರ ಪೇಟೆ, ಬಳೆ ಪೇಟೆ ಹೀಗೆ ಅನೇಕ ಪೇಟೆಗಳನ್ನು ನಿರ್ಮಿಸಿಕೊಟ್ಟರು ಎಂದು ತಿಳಿಸಿದರು.

ನಾಡಪ್ರಭು ಕೆಂಪೇಗೌಡ ಅವರ ಸಾಧನೆಗಳನ್ನು ಮೆಲುಕು ಹಾಕುವುದು ಇಂದಿನ ಅವಶ್ಯಕತೆಯಾಗಿದೆ. ಅವರ ಆದರ್ಶಗಳು ಇಂದು ಎಲ್ಲರಿಗೂ ದಾರಿದೀಪವಾಗಿವೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅವರು ಹೇಳಿದರು.

ಕಾರ್ಯಕ್ರಮದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಜಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಹಾಜರಿದ್ದರು.

> ನಾಡಪ್ರಭು ಕೆಂಪೇಗೌಡರು ಉತ್ತಮ ಕೃಷಿ ಚಟುವಟಿಕೆಗಳಿಗೆ ಹಾಗೂ ಗೃಹ ಬಳಕೆಗಾಗಿ ವಿವಿಧ ಕೆರೆಗಳನ್ನು ಕಟ್ಟಿಸಿದರು. ಧಾರ್ಮಿಕ ಪ್ರತೀಕವಾಗಿ ದೇವಸ್ಥಾನಗಳನ್ನು ಕಟ್ಟಿಸಿದರು. ವಿವಿಧ ಉದ್ಯಾನವನಗಳನ್ನು ನಿರ್ಮಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ. ಬೆಂಗಳೂರನ್ನು ಜಾಗತಿಕವಾಗಿ ಗುರುತಿಸಲು ಕೆಂಪೇಗೌಡರ ಕೊಡುಗೆಯು ಅವಿಸ್ಮರಣೀಯವಾಗಿದ್ದು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಅಭಿಪ್ರಾಯಪಟ್ಟರು.

## ಜಿ.ಪಂ ಸಿಇಓ ಭರತ್‌ರಿಂದ ನರೇಗಾ ಕಾಮಗಾರಿ ವೀಕ್ಷಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ತಾಲೂಕಿನ ವಿವಿಧ ಗ್ರಾಮ ಪಂಚಾಯಿತಿಗಳಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಅನುಷ್ಠಾನಗೊಳಿಸಿದ ಕಾಮಗಾರಿಗಳನ್ನು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ವೀಕ್ಷಣೆ ಮಾಡಿದರು.

ಗದಗ ತಾಲೂಕಿನ ಲಕ್ಕುಂಡಿ ಗ್ರಾಮದಲ್ಲಿ ಕೈಗೊಂಡಿರುವ ಸಿಸಿ ಚರಂಡಿ ಕಾಮಗಾರಿ ವೀಕ್ಷಣೆ ನಡೆಸಿ, ಕಾಮಗಾರಿಯ ಗುಣಮಟ್ಟ ಕಾಯ್ದುಕೊಳ್ಳುವಂತೆ ನಿರ್ದೇಶನ ನೀಡಿದರು. ಬಳಿಕ ಹಾತಲಗೇರಿ ಗ್ರಾ.ಪಂ ವ್ಯಾಪ್ತಿಯ ಸಂಭಾಪೂರ ಗ್ರಾಮದಲ್ಲಿ ಸಿಸಿ ರಸ್ತೆ ಕಾಮಗಾರಿ ವೀಕ್ಷಿಸಿದರು.

ತಾಲೂಕಿನ ವಿವಿಧ ಗ್ರಾ.ಪಂ ವ್ಯಾಪ್ತಿಯಲ್ಲಿಯ ಉದ್ಯೋಗ ಖಾತ್ರಿ ಯೋಜನೆಯಡಿ ನಿರ್ಮಿಸಲಾದ ಸಿಸಿ ರಸ್ತೆ ಹಾಗೂ ಚರಂಡಿ ಕಾಮಗಾರಿ ವೀಕ್ಷಣೆ ಮಾಡಿ, ಕಾಮಗಾರಿ ಕಡತ, ಗುಣಮಟ್ಟ, ಅಳತೆ ಪರಿಶೀಲನೆ ಮಾಡಿದರು.

ಗ್ರಾ.ಪಂ ವ್ಯಾಪ್ತಿಯಲ್ಲಿ ನರೇಗಾ ಯೋಜನೆಯಡಿ ನಿರ್ಮಾಣವಾಗುವ ಸಿಸಿ ರಸ್ತೆಗಳು, ಚರಂಡಿ ಕಾಮಗಾರಿಗಳು ಉತ್ತಮ ಗುಣಮಟ್ಟದಿಂದ ಕೂಡಿರಬೇಕು. ಗುಣಮಟ್ಟದಲ್ಲಿ ಯಾವುದೇ ರೀತಿಯ ಲೋಪವಾಗದಂತೆ ನಿಗಾ ವಹಿಸುವ ಮೂಲಕ ಕಾಮಗಾರಿಯ ಲಾಭ ಗ್ರಾಮದ ಪ್ರತಿಯೊಬ್ಬರಿಗೂ ತಲುಪುವಂತೆ ಮಾಡಬೇಕು ಎಂದು ಸೂಚಿಸಿದರು.

ಈ ಸಂದರ್ಭದಲ್ಲಿ ತಾಲೂಕು ಪಂಚಾಯತ ಸಹಾಯಕ ನಿರ್ದೇಶಕ (ಗ್ರಾ.ಉ), ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಜಿಲ್ಲಾ ಸಹಾಯಕ ಸಮನ್ವಯ ಸಂಯೋಜಕ, ತಾಂತ್ರಿಕ ಸಂಯೋಜಕ, ತಾಂತ್ರಿಕ ಸಹಾಯಕರು, ಬಿ.ಎಫ್.ಟಿಗಳು, ಜಿ.ಕೆ.ಎಮ್‌ಗಳು ಹಾಗೂ ಗ್ರಾ.ಪಂ ಸಿಬ್ಬಂದಿಗಳು ಹಾಜರಿದ್ದರು.

### ಅಂತಾರಾಷ್ಟ್ರೀಯ ಮಾದಕ ದ್ರವ್ಯ ವಿರೋಧ ದಿನಾಚರಣೆಯಲ್ಲಿ ಎಸ್‌ಪಿ ಬಿ.ಎಸ್. ನೇಮಗೌಡ

## ವಿದ್ಯಾರ್ಥಿ ಜೀವನ ಅಮೂಲ್ಯವಾದದ್ದು

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಾದಕ ವಸ್ತುಗಳ ಬಳಕೆ ಹಾಗೂ ಅಕ್ರಮ ಸಾಗಣೆಯಿಂದ ಉಂಟಾಗುವ ಸಮಸ್ಯೆಗಳ ಬಗ್ಗೆ ಜಾಗತಿಕವಾಗಿ ಅರಿವು ಮೂಡಿಸುವ ಸಲುವಾಗಿ ಪ್ರತಿವರ್ಷ ಜೂನ್ 26ರಂದು ಅಂತಾರಾಷ್ಟ್ರೀಯ ಮಾದಕ ವಸ್ತುಗಳ ದುರುಪಯೋಗ ಮತ್ತು ಕಾನೂನು ಬಾಹಿರ ಸಾಗಾಟ ವಿರೋಧಿ ದಿನವನ್ನು ಆಚರಿಸಲಾಗುತ್ತದೆ. ವಿದ್ಯಾರ್ಥಿ ಜೀವನ ಬಹು ಅಮೂಲ್ಯವಾಗಿದ್ದು, ಇದನ್ನು ಸರಿಯಾಗಿ ಬಳಕೆ ಮಾಡಿಕೊಂಡಲ್ಲಿ ದೇಶಕ್ಕೆ ಉತ್ತಮ ನಾಗರಿಕರಾಗಲು ಸಾಧ್ಯವಾಗುತ್ತದೆ ಎಂದು ಗದಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಹೇಳಿದರು.



ಪಟ್ಟಣದ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ.ಅಗಡಿ ಪದವಿಪೂರ್ವ ಮಹಾವಿದ್ಯಾಲಯದಲ್ಲಿ ಪೊಲೀಸ್ ಇಲಾಖೆಯ ವತಿಯಿಂದ ಹಮ್ಮಿಕೊಂಡಿದ್ದ ಅಂತಾರಾಷ್ಟ್ರೀಯ ಮಾದಕ ದ್ರವ್ಯ ವಿರೋಧ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ಕಾಲೇಜು ಹಂತದಲ್ಲಿ ವಿದ್ಯಾರ್ಥಿಗಳು ಹೊಸ ಹೊಸ ವಿಷಯಗಳ ಬಗ್ಗೆ ಗಮನ ಹರಿಸಿ ಅದರಿಂದ ಆಕರ್ಷಿತರಾಗಿ ದುಶ್ಚಟಗಳ ದಾಸರಾಗುತ್ತಿರುವದನ್ನು ನೋಡುತ್ತಿದ್ದೇವೆ. ದುಶ್ಚಟಗಳಿಗೆ ಬಲಿಯಾಗಿ ಆರೋಗ್ಯ, ಸಮಯ ಹಾಳು ಮಾಡಿಕೊಳ್ಳುವ ಬಗ್ಗೆ ಎಚ್ಚರಿಕೆ ವಹಿಸಬೇಕು. ಕುಡಿತ, ಗುಟ್ಕಾ, ಗಾಂಜಾ, ಅಫೀಮು ಇತ್ಯಾದಿಗಳಿಂದ ಬಹುಬೇಗ ಆಕರ್ಷಿತರಾಗುವ ಸಂಭವಿರುತ್ತದೆ. ಹೊಸದನ್ನು ಅನುಭವಿಸಬೇಕು ಎನ್ನುವ ತುಡಿತ ಬಂದು ನಿಮ್ಮನ್ನು ಕೆಟ್ಟ ದಾರಿಯಲ್ಲಿ ಸಾಗುವಂತೆ ಮಾಡುತ್ತದೆ. ಮಾದಕ ದ್ರವ್ಯಗಳ ಅಭ್ಯಾಸದಿಂದ ಸಮಾಜದಲ್ಲಿ ಅನೇಕ ದುಷ್ಪರಿಣಾಮಗಳು ಉಂಟಾಗುತ್ತಿವೆ. ಇದರಿಂದ ಅವರ ಜೀವನ ಹಾಳು ಮಾಡಿಕೊಂಡಿರುವ ಅನೇಕ ಘಟನೆಗಳನ್ನು ನೋಡಬಹುದಾಗಿದೆ. ಅದಕ್ಕಾಗಿ ಸಾಧ್ಯವಾದಷ್ಟು ಮಾದಕ ವ್ಯಸನಕ್ಕೆ ಬಲಿಯಾಗದೆ ಎಚ್ಚರಿಕೆಯಿಂದ ಸಾಗಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅಗಡಿ ಇಂಜಿನಿಯರಿಂಗ್ ಕಾಲೇಜಿನ ಪ್ರಾಚಾರ್ಯ ಡಾ.ಪರಶುರಾಮ ಬಾರ್ಕಿಯವರು ವಹಿಸಿದ್ದರು. ಪ.ಪೂ. ಕಾಲೇಜ ಪ್ರಾಚಾರ್ಯರಾದ ಡಾ.ಎನ್. ಹಯವದನ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಿಪಿಐ ನಾಗರಾಜ ಮಾಡಳ್ಳಿ ಮಾತನಾಡಿದರು. ಮಹಾವಿದ್ಯಾಲಯದ ಬೋಧಕ ಹಾಗೂ ಭೋದಕೇತರ ಸಿಬ್ಬಂದಿ ವರ್ಗದವರು ಹಾಜರಿದ್ದರು. ಉಪನ್ಯಾಸಕ ಸಿ.ಎಸ್. ಹಿರೇಮಠ ನಿರೂಪಿಸಿದರು.

# ದೇವಸ್ಥಾನ ಜೀರ್ಣೋದ್ಧಾರಕ್ಕೆ ಹಣಕಾಸಿನ ನೆರವು



■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಹರಪನಹಳ್ಳಿ ತಾಲೂಕಿನ ಬಾಗಳಿ ಗ್ರಾಮದ ಹರಿಜನ ಕಾಲೋನಿಯ ಗಾಳೆಮ್ಮ ದೇವಸ್ಥಾನದ ಜೀರ್ಣೋದ್ಧಾರಕ್ಕೆ ಧರ್ಮಸ್ಥಳ ಸಂಘದ ವತಿಯಿಂದ ಒಂದು ಲಕ್ಷ ರೂ. ಗಳ ಚೆಕ್ ದೇವಸ್ಥಾನದ ಸಮಿತಿಗೆ ನೀಡಲಾಯಿತು. ಸಂಘದ ವಿಜಯನಗರ ಜಿಲ್ಲಾ ನಿರ್ದೇಶಕ ಜನಾರ್ದನ್, ಚೆಕ್ ಹಸ್ತಾಂತರ ಮಾಡಿದರು.

ಈ ಸಂದರ್ಭದಲ್ಲಿ ದೇವಸ್ಥಾನ ಸಮಿತಿಯ ಅಧ್ಯಕ್ಷ ದುರುಗಪ್ಪ, ಸೇವಾ ಪ್ರತಿನಿಧಿ ಶಿಲ್ಪಾ, ಶೋಭಾ, ಯೋಜನಾಧಿಕಾರಿ ಬಾಬು, ಅಶ್ವಥ್, ಬಣಕಾರ ಕೊಟ್ರೇಶ್, ಚನ್ನಬಸಪ್ಪ, ಚಾಕ್ರಿ ಮಂಜುನಾಥ ಹಾಗೂ ಇತರರಿದ್ದರು.

# ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ತಾಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕ ಹಾಗೂ ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ, 2024–25ನೇ ಸಾಲಿನ ಪ್ರವೇಶಕ್ಕೆ ಹೊಸದಾಗಿ ಅರ್ಜಿ ಸಲ್ಲಿಸಲು ಬಯಸುವ, ಪ್ರವರ್ಗ –1, 2ಎ, 2ಬಿ, 3ಎ, 3ಬಿ, ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳು ದಿ. 10–07–24 ರ ಒಳಗಡೆ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖಾಧಿಕಾರಿ ವಿಜಯಲಕ್ಷ್ಮೀ ವಿ ಹತ್ತಿಕಾಳು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲಿಂ.ಪಂಚಾಕ್ಷರ ಗವಾಯಿಗಳವರ, ಲಿಂ.ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ ಪುಣ್ಯಸ್ಮರಣೋತ್ಸವ

# ಉಭಯ ಶ್ರೀಗಳು ನಾಡಿನ ಕಲ್ಯಾಣಕ್ಕಾಗಿ ಧರೆಗಿಳಿದವರು

■ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀ ವೀರೇಶ್ವರ ಪುಣ್ಯಾಶ್ರಮದ ಸಂಗೀತ ವಿದ್ಯಾಲಯದಿಂದ ಈ ಭೂಮಿ ಪುಣ್ಯ ಭೂಮಿಯಾಗಿದೆ ಎಂದು ಹುಬ್ಬಳ್ಳಿಯ ಮೂರು ಸಾವಿರ ಮಠದ ಪೂಜ್ಯಶ್ರೀ ಜ.ಗುರುಸಿದ್ಧ ರಾಜಯೋಗೀಂದ್ರ ಮಹಾಸ್ವಾಮಿಗಳು ಹೇಳಿದರು.

ಅವರು ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಪರಮಪೂಜ್ಯ ಗಾನಯೋಗಿ ಶಿವಯೋಗಿ ಲಿಂ. ಪಂಚಾಕ್ಷರ ಗವಾಯಿಗಳವರ 80ನೇ ಪುಣ್ಯ ಸ್ಮರಣೋತ್ಸವ ಹಾಗೂ ಪದ್ಮಭೂಷಣ ಲಿಂ.ಡಾ. ಪಂ. ಪುಟ್ಟರಾಜ ಕವಿ ಗವಾಯಿಗಳವರ 14ನೇ ಪುಣ್ಯಸ್ಮರಣೋತ್ಸವ, ಉಭಯ ಗುರುಗಳ ಜಾತ್ರಾ ಮಹೋತ್ಸವದ ಅಂಗವಾಗಿ ಜರುಗಿದ ವಿಶೇಷ ಧರ್ಮೋತ್ತೇಜಕ ಮಹಾಸಭೆಯ ಸಾನಿಧ್ಯವಹಿಸಿ ಮಾತನಾಡಿದರು.

ವ್ಯಕ್ತಿಯು ಪರಿಪೂರ್ಣವಾಗಿ ಬೆಳೆಯಲು ಗುರು ಬೇಕು. ಅದರಂತೆ ತ್ರಿಕಾಲ ಜ್ಞಾನಿ ಶ್ರೀಗುರು ಹಾನಗಲ್ ಕುಮಾರೇಶ್ವರರು ಬಾಲಕನಾಗಿದ್ದ ಪಂ. ಪಂಚಾಕ್ಷರಿ ಗವಾಯಿಗಳವರನ್ನು ಕಂಡಾಗ ಈ ಮಗು ಮುಂದೆ ಸಾಧನೆ ಮಾಡುತ್ತಾನೆ ಎಂದು ಗುರುತಿಸಿ ವಿದ್ಯೆ ನೀಡಿದರಲ್ಲದೆ, ವಿದ್ಯೆ ವಯಕ್ತಿಕವಾಗಬಾರದು. ಅದು ಪರಿಪೂರ್ಣವಾಗಬೇಕಾದರೆ ಅಂಧರಿಗೆ, ಅನಾಥರಿಗೆ, ದೀನರಿಗೆ ವಿದ್ಯೆ ಕಲಿಸಬೇಕೆಂದು ಆಶೀರ್ವದಿಸಿದರು. ಅದರಂತೆ ಇಂದು ದೇಶ–ವಿದೇಶಗಳಲ್ಲಿ ಪುಣ್ಯಾಶ್ರಮದ ಭಕ್ತರು ಸಂಗೀತ ಸಾಧನೆ ಮಾಡಿದ್ದಾರೆ ಎಂದರೆ ಅದು ಪಂ. ಪಂಚಾಕ್ಷರಿ ಗವಾಯಿಗಳವರ ಕೊಡುಗೆಯಾಗಿದೆ ಎಂದು ಹೇಳಿದರು.




ಪಂ. ಪಂಚಾಕ್ಷರಿ ಗವಾಯಿಗಳವರು ಆಚಾರ ನಿಷ್ಠೆ ಶಿವಪೂಜೆ ಮಾಡುತ್ತಿದ್ದರು. ಅವರ ಆರೋಗ್ಯ ಕ್ಷೀಣಿಸಿದಾಗ ಆಚಾರಕ್ಕೆ ದಕ್ಕೆ ಬರುತ್ತದೆ ಎಂದು ಆಂಗ್ಲ ಔಷಧಿಗಳನ್ನು ತಿರಸ್ಕರಿಸಿ ದೇಹ ತ್ಯಾಗ ಮಾಡಿ ಮೌಲ್ಯಯುತವಾದ ಬದುಕನ್ನು ಬದುಕಿದರು. ಅಂತಹ ಮಹಾನಭಾವರು ಪುಣ್ಯಾಶ್ರಮ ಕಟ್ಟಿ ಸಾಕಷ್ಟು ಜನರಿಗೆ ಆಶ್ರಯ ನೀಡಿದ್ದಾರೆ ಎಂದು ಹೇಳಿದರು.

ವೇದಿಕೆ ಮೇಲೆ ಗಂಗಾವತಿ ಕಲ್ಮಠದ ಕೊಟ್ಟೂರೇಶ್ವರ ಮಹಾಸ್ವಾಮಿಗಳು, ಬಳಗಾನೂರಿನ ಪೂಜ್ಯಶ್ರೀ ಶಿವಶಾಂತವೀರ ಶರಣರು, ಮುದ್ದೇಬಿಹಾಳದ ಪೂಜ್ಯಶ್ರೀ ಡಾ. ಲಾಲಲಿಂಗೇಶ್ವರ ಶರಣರು, ಹಿರೇಗುಳವಾಳದ ಪೂಜ್ಯಶ್ರೀ ಹನುಮಂತಪ್ಪ ಯಾಳವಾರ ಅವರು ಸಮ್ಮುಖ ವಹಿಸಿದ್ದರು. ನಂದೀಕೇಶ್ವರದ ಮುಚಖಂಡಯ್ಯನವರು, ಡಾ. ಜೆ.ಎಂ. ಚೆಂದುನವರ, ಬಳ್ಳಾರಿಯ ಪುರುಷೋತ್ತಮಗೌಡ್ರ, ಪಂಚಾಕ್ಷರಯ್ಯ ಹಿಡ್ಕಿಮಠ, ಕಲ್ಲೂರಿನ ಕಳಕಪ್ಪಗೌಡ್ರ ಜಮ್ಮಾಪೂರ, ಜೇವರ್ಗಿಯ ನಾಡಗೌಡ್ರ ಅಪ್ಪಸಾಬಗೌಡ್ರ, ಬದಾಮಿಯ ನಾಗರಾಜ ಕಾಚಟ್ಟಿ, ಎಸ್.ಬಿ. ಅವರಾದಿ, ರಾಚಣ್ಣ ಪಟ್ಟಣದ ಮುಂತಾದವರು ಉಪಸ್ಥಿತರಿದ್ದರು.

ಪಂ. ಪಂಚಾಕ್ಷರಿ ಗವಾಯಿಗಳವರ ಸಂಗೀತ ವಿದ್ಯಾಲಯದ ವಿದ್ಯಾರ್ಥಿಗಳು ಪ್ರಾರ್ಥಿಸಿದರು. ಶಿವಲಿಂಗಯ್ಯಶಾಸ್ತ್ರಿಗಳು ಹಿರೇಮಠ ಸಿದ್ದಾಪೂರ ಸ್ವಾಗತಿಸಿದರು. ಅಡ್ನೂರಿನ ಕಲ್ಲಿನಾಥ ಶಾಸ್ತ್ರಿಗಳು ಸಭಾ ನಿರೂಪಣೆ ಮಾಡಿದರು. ಪೂಜ್ಯಶ್ರೀ ಕಲ್ಲಯ್ಯಜ್ಜನವರು ಅಭಾರ ಮನ್ನಣೆ ಮಾಡಿದರು.

ಇದೇ ಸಂದರ್ಭದಲ್ಲಿ ಮದರಿಯ ರಾಚಯ್ಯ ಶಾಸ್ತ್ರಿ ಹಿರೇಮಠ–ಪ್ರವಚನ ಕ್ಷೇತ್ರ, ನಾಗಾವಿಯ ಲಕ್ಷ್ಮಣ ತಳವಾರ–ಗಾಯನ ಕ್ಷೇತ್ರ ಹಾಗೂ ಡಾ.ಹನುಮಂತ ಕೊಡಗಾನೂರ ಅವರಿಗೆ 'ಕುಮಾರಶ್ರೀ' ಪ್ರಶಸ್ತಿಯನ್ನು ಪ್ರಧಾನ ಮಾಡಲಾಯಿತು. ಸಂಗೀತ ಕ್ಷೇತ್ರದಲ್ಲಿ ಸಾಧನೆ ಮಾಡಿದ ರಾಮಣ್ಣ ಮಲ್ಲಿಗವಾಡ ಅವರಿಗೆ ಪದ್ಮಭೂಷಣ ಪಂ. ಪುಟ್ಟರಾಜ ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು.

ಜಗದ್ಗುರು ಮಹಾಸನ್ನಿಧಿಯವರಿಂದ ಪದ್ಮಭೂಷಣ ಡಾ. ಪಂ. ಪುಟ್ಟರಾಜ ಕವಿಗವಾಯಿಗಳವರ 'ಅಷ್ಟೋತ್ತರ ಶತನಾಮಾವಳಿ', 'ಅಷ್ಟಾವರಣ ಕಥಾ ಕೀರ್ತನ ಮಾಲಿಕೆ' ಹಾಗೂ 'ಶ್ರೀಗುರು ಪುಟ್ಟರಾಜ ಚರಿತಂ(ಪುರಾಣ)' ಲೋಕಾರ್ಪಣೆಗೊಂಡವು. ನಂತರ ಅಹೋರಾತ್ರಿ ಸ್ವರಸಮಾರಾಧನೆ ನಡೆಯಯಿತು.

# ಐತಿಹಾಸಿಕ ಕ್ರಮಗಳನ್ನು ಕೇಂದ್ರ ಬಜೆಟ್‌ನಲ್ಲಿ ಘೋಷಿಸಲಾಗುವುದು : ರಾಷ್ಟ್ರಪತಿ ಮುರ್ಮು



■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಮುಂಬರುವ ಸಂಸತ್ತಿನ ಅಧಿವೇಶನಗಳಲ್ಲಿ ಪ್ರಮುಖ ಆರ್ಥಿಕ, ಸಾಮಾಜಿಕ ನಿರ್ಧಾರಗಳು ಮತ್ತು ಐತಿಹಾಸಿಕ ಕ್ರಮಗಳನ್ನು ಕೇಂದ್ರ ಬಜೆಟ್‌ನಲ್ಲಿ ಘೋಷಿಸಲಾಗುವುದು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಸಂಸತ್ತಿನ ಜಂಟಿ ಅಧಿವೇಶನವನ್ನು ಉದ್ದೇಶಿಸಿ ಮಾತನಾಡಿದರು.

18 ನೇ ಲೋಕಸಭೆಯ ಸಂಸತ್ತಿನ ಜಂಟಿ ಅಧಿವೇಶನದ ತನ್ನ ಮೊದಲ ಭಾಷಣದಲ್ಲಿ ಹೊಸ ಸಂಸದರನ್ನು ಅಭಿನಂದಿಸಿದ ಅಧ್ಯಕ್ಷೆ ಮುರ್ಮು, ಸರ್ಕಾರ ಭಾರತದ ಜನರ ಆಕಾಂಕ್ಷೆಗಳನ್ನು ಪೂರೈಸುವ ಮಾಧ್ಯಮವಾಗಿ ಕಾರ್ಯನಿರ್ವಹಿಸುತ್ತಾರೆ ಎಂದು ಅವರು ಆಶಿಸಿದರು.

ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟದ (ಎನ್‌ಡಿಎ) ಅಭ್ಯರ್ಥಿ ಮತ್ತು ಕೋಟಾದ ಸಂಸದ ಓಂ ಬಿರ್ಲಾ ಅವರು 18 ನೇ ಲೋಕಸಭೆಯ ಸ್ಪೀಕರ್ ಆಗಿ ಆಯ್ಕೆಯಾದರು, ಇದಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಅವರು ಪ್ರಸ್ತಾವನೆಯನ್ನು ಮಂಡಿಸಿದರು ಮತ್ತು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಅನುಮೋದಿಸಿದರು. ಧ್ವನಿ ಮತದ ಮೂಲಕ ಸದನದಲ್ಲಿ ಈ ಪ್ರಸ್ತಾಪವನ್ನು ಅಂಗೀಕರಿಸಲಾಯಿತು.

ಇದು ಸಾರ್ವತ್ರಿಕ ಚುನಾವಣೆಯ ನಂತರದ ಮೊದಲ ಲೋಕಸಭೆ ಅಧಿವೇಶನವಾಗಿದ್ದು, ಇದರಲ್ಲಿ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟ (ಎನ್‌ಡಿಎ) 293 ಸ್ಥಾನಗಳನ್ನು ಗಳಿಸಿದರೆ, ಇಂಡಿಯಾ ಬ್ಲಾಕ್ 234 ಸ್ಥಾನಗಳನ್ನು ಪಡೆದುಕೊಂಡಿತು. ಆದರೆ ಬಿಜೆಪಿಗೆ ಸ್ವಂತವಾಗಿ ಬಹುಮತ ಸಾಧಿಸಲು ಸಾಧ್ಯವಾಗಲಿಲ್ಲ, ಏಕೆಂದರೆ ಅದು ಕೇವಲ 240 ಸ್ಥಾನಗಳಲ್ಲಿ ಗೆಲುವು ಸಾಧಿಸಿತು.

ಲೋಕಸಭೆ ಚುನಾವಣೆಯಲ್ಲಿ ಜಮ್ಮು ಮತ್ತು ಕಾಶ್ಮೀರದಲ್ಲಿ ಹೆಚ್ಚಿನ ಮತದಾನವನ್ನು ಎತ್ತಿ ತೋರಿಸಿದ ಮುರ್ಮು, ಕಾಶ್ಮೀರವು ಹಲವು ದಶಕಗಳ ಮತದಾನ ದಾಖಲೆಗಳನ್ನು ಮುರಿಯುವ ಮೂಲಕ ಭಾರತದ ಶತ್ರುಗಳಿಗೆ ತಕ್ಕ ಉತ್ತರವನ್ನು ನೀಡಿದೆ ಎಂದು ಹೇಳಿದರು.

## ಅಹವಾಲುಗಳನ್ನು ಕಾಲಮಿತಿಯಲ್ಲಿ ಪರಿಹರಿಸುವಂತೆ ಸಚಿವ ಸಂತೋಷ ಲಾಡ್ ಸೂಚನೆ

# ಜಿಲ್ಲಾ ಮಟ್ಟದ 5ನೇ ಜನತಾದರ್ಶನ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಿಲ್ಲಾಡಳಿತದ ವತಿ ಯಿಂದ ಬುಧವಾರ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ 5ನೇ ಜನತಾ ದರ್ಶನ ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರಿಂದ ಒಟ್ಟು 175 ಅಹವಾಲುಗಳನ್ನು ಸ್ವೀಕರಿಸಲಾಯಿತು. ಎಲ್ಲವನ್ನು ಪರಿಶೀಲಿಸಿ ಕಾಲಮಿತಿಯಲ್ಲಿ ಅಹವಾಲುಗಳನ್ನು ಪರಿಹರಿಸುವಂತೆ ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ಅಧಿಕಾರಿಗಳಿಗೆ ಸೂಚಿಸಿದರು.

ಜನತಾ ದರ್ಶನದಲ್ಲಿ ಜಿಲ್ಲೆಯ ವಿವಿಧ ಸ್ಥಳಗಳಿಂದ ಆಗಮಿಸಿದ ಸಾರ್ವಜನಿಕರು, ಸಂಘ–ಸಂಸ್ಥೆಗಳ ಪ್ರತಿನಿಧಿಗಳು ತಮ್ಮ ಸಮಸ್ಯೆಗಳ ಬಗ್ಗೆ, ಸಹಾಯ ಸೌಲಭ್ಯಗಳ ಬಗ್ಗೆ ಸುಮಾರು 175 ಅರ್ಜಿ ಅಹವಾಲುಗಳನ್ನು ಸಲ್ಲಿಸಿದರು. ಸಚಿವ ಸಂತೋಷ ಲಾಡ್ ಹಾಗೂ ಜಿಲ್ಲಾಧಿಕಾರಿ ದಿವ್ಯ ಪ್ರಭು ಬೆಳಿಗ್ಗೆ 11.30 ಗಂಟೆಯಿಂದ ಮಧ್ಯಾಹ್ನ 3.30 ಗಂಟೆಯವರೆಗೆ ಸತತ 4 ಗಂಟೆ ವೇದಿಕೆಯಲ್ಲಿ ನಿಂತು




ಸರದಿಯಲ್ಲಿ ಬರುವ ಸಾರ್ವಜನಿಕರ ಸಮಸ್ಯೆಯನ್ನು ತಾಳ್ಮೆಯಿಂದ ಆಲಿಸಿದರು.


ಜನತಾ ದರ್ಶನದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಕಾನೂನಾತ್ಮಕವಾಗಿ, ಸ್ಥಳೀಯವಾಗಿ ಬಗೆಹರಿಸಬಹುದಾದ ಅಹವಾಲುಗಳನ್ನು ಜಿಲ್ಲಾಡಳಿತದ ಮಟ್ಟದಲ್ಲಿ ಬಗೆಹರಿಸಲಾಗುವುದು. ಉಳಿದವುಗಳನ್ನು ಹಿಂಬರಹ ನೀಡಲಾಗುವುದು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಅಂಗನವಾಡಿ ಕಾರ್ಯಕರ್ತೆಯರಿಗೆ ಹಾಗೂ ಮೇಲ್ವಿಚಾರಕರಿಗೆ ಸಚಿವರು ಸ್ಮಾರ್ಟ್ ಫೋನ್ ವಿತರಿಸಿದರು. ಜಿಲ್ಲಾಧಿಕಾರಿ ದಿವ್ಯ ಪ್ರಭು, ಮಹಾನಗರ ಪೊಲೀಸ್ ಆಯುಕ್ತರಾದ ರೇಣುಕಾ ಸುಕುಮಾರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಗೋಪಾಲ ಬ್ಯಾಕೋಡ, ಜಿಲ್ಲಾ ಪಂಚಾಯತ್ ಸಿಇಓ ಸ್ವರೂಪ ಟಿ.ಕೆ., ಮಹಾನಗರ ಪಾಲಿಕೆ ಆಯುಕ್ತ ಡಾ. ಈಶ್ವರ ಉಳ್ಳಾಗಡ್ಡಿ, ಹುಡಾ ಆಯುಕ್ತ ಸಂತೋಷ ಬಿರಾದಾರ ವೇದಿಕೆಯಲ್ಲಿದ್ದರು. ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಜನತಾದರ್ಶನದಲ್ಲಿ ಭಾಗವಹಿಸಿದ್ದರು.

> ಅವಳಿ ನಗರಗಳಲ್ಲಿ ವಿವಿಧೆಡೆ ಕಾನೂನುಬಾಹಿರ, ಅನಧಿಕೃತ ಬಡಾವಣೆಗಳನ್ನು ನಿರ್ಮಿಸಿ ಸಾರ್ವಜನಿಕರಿಗೆ ತೊಂದರೆಗಳಾಗಿವೆ. ಹೊಸ ಕಾನೂನುಗಳನ್ವಯ ಅನಧಿಕೃತ ಬಡಾವಣೆಗಳ ಸಮಸ್ಯೆ ಬಗೆಹರಿಸಲು ಸರಕಾರದ ಗಮನಕ್ಕೆ ತರಲಾಗುವುದು. ಜಿಲ್ಲೆಯಲ್ಲಿ ಕಳೆದೊಂದು ವರ್ಷದಿಂದ ಕೈಗೊಂಡ ವಿವಿಧ ಇಲಾಖೆಗಳ ಕಾಮಗಾರಿಗಳನ್ನು ಸ್ವತಃ ಖುದ್ದಾಗಿ ಭೇಟಿ ನೀಡಿ ಪರಿಶೀಲಿಸಲಾಗುವುದೆಂದು ಸಚಿವರು ತಿಳಿಸಿದರು.

# ಭಾರತ 'ಹಿಂದೂ ರಾಷ್ಟ್ರವಲ್ಲ' ಎಂಬುವುದನ್ನು ಚುನಾವಣಾ ಫಲಿತಾಂಶ ತೋರಿಸಿದೆ

■ವಿಜಯಸಾಕ್ಷಿ ಸುದ್ದಿ, ನವದೆಹಲಿ



ನೊಬೆಲ್ ಪ್ರಶಸ್ತಿ ಪುರಸ್ಕೃತ ಅಮರ್ತ್ಯ ಸೇನ್ ಅವರು ಬುಧವಾರ ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ್ದು, ಲೋಕಸಭೆ ಚುನಾವಣೆಯ ಫಲಿತಾಂಶ ಭಾರತ 'ಹಿಂದೂ ರಾಷ್ಟ' ಅಲ್ಲ ಎಂಬುವುದನ್ನು ನಿರೂಪಿಸಿದೆ ಎಂದಿದ್ದಾರೆ.

ಬುಧವಾರ ಸಂಜೆ ಅಮೆರಿಕದಿಂದ ಕೊಲ್ಕತ್ತಾ ವಿಮಾನ ನಿಲ್ದಾಣಕ್ಕೆ ಬಂದಿಳಿದ ವೇಳೆ ಮಾಧ್ಯಮದವರೊಂದಿಗೆ ಮಾತನಾಡಿದ ಸೇನ್, ಭಾರತವು ಜಾತ್ಯತೀತ ಸಂವಿಧಾನವನ್ನು ಹೊಂದಿರುವ ಜಾತ್ಯತೀತ ರಾಷ್ಟವಾಗಿರುವಾಗ 'ಮುಕ್ತ ಮನಸ್ಸಿನ ರಾಜಕೀಯ' ಅವಶ್ಯಕತೆಯಿದೆ ಎಂದು ಹೇಳಿದ್ದಾರೆ.

ಹಿಂದೆ (ಬಿಜೆಪಿ ನೇತೃತ್ವದ ಕೇಂದ್ರ ಸರ್ಕಾರದ ಅವಧಿಯಲ್ಲಿ) ಇದ್ದಂತೆ ವಿಚಾರಣೆಯಿಲ್ಲದೆ ಜನರನ್ನು ಜೈಲಿಗೆ ಹಾಕುವುದು ಮತ್ತು ಶ್ರೀಮಂತರು–ಬಡವರ ನಡುವಿನ ಅಂತರವನ್ನು ಹೆಚ್ಚಿಸುವಂತಹ ಕೆಲವು ಘಟನೆಗಳು ಇನ್ನೂ ಮುಂದುವರೆದಿದೆ. ಅದು ನಿಲ್ಲಬೇಕಿದೆ ಎಂದು ಸೇನ್ ಆಗ್ರಹಿಸಿದ್ದಾರೆ.

"ನಾನು ಚಿಕ್ಕವನಿದ್ದಾಗ, ಬ್ರಿಟಿಷರು ನನ್ನ ಚಿಕ್ಕಪ್ಪಂದಿರು ಮತ್ತು ಸೋದರ ಸಂಬಂಧಿಗಳನ್ನು ವಿಚಾರಣೆಯಿಲ್ಲದೆ ಜೈಲಿಗೆ ಹಾಕಿದ್ದರು. ಇದರಿಂದ ಭಾರತ ಮುಕ್ತವಾಗಲಿದೆ ಎಂದು ಆಶಿಸಿದ್ದೆವು. ಆದರೆ, ಕಾಂಗ್ರೆಸ್ ಆಡಳಿತವಾಧಿಯಲ್ಲೂ ಅದು ಮುಂದುವರೆಯಿತು. ಪ್ರಸ್ತುತ ಸರ್ಕಾರದಲ್ಲಿ ಅದು ಅವ್ಯಾಹತವಾಗಿದೆ" ಎಂದು ಸೇನ್ ಹೇಳಿದ್ದಾರೆ.

# ಲೆಕ್ಕ–ಶಾಖೆ ಸಿಬ್ಬಂದಿಗಳಿಗೆ ಕಾರ್ಯಾಗಾರ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಕರ್ನಾಟಕ ನಗರ ಮೂಲಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮದ ಕೇಂದ್ರ ಕಛೇರಿಯು ಕರ್ನಾಟಕ ನಗರ ನೀರು ಸರಬರಾಜು ಆಧುನೀಕರಣ ಯೋಜನೆಯ ಹುಬ್ಬಳ್ಳಿ ಯೋಜನಾ ಅನುಷ್ಠಾನ ಘಟಕದಲ್ಲಿ ಸಾಮರ್ಥ್ಯ ಅಭಿವೃದ್ಧಿ ಭಾಗವಾಗಿ ಹಣಕಾಸು ಮತ್ತು ಲೆಕ್ಕಪತ್ರ, ಗುತ್ತಿಗೆ ಕರಾರು ಒಪ್ಪಂದ ನಿರ್ವಹಣೆ ಹಾಗೂ ಖರೀದಿ ಪ್ರಕ್ರಿಯೆ ಕುರಿತು ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿತ್ತು.

ಕಾರ್ಯಾಗಾರವನ್ನು ಕೆಯುಐಡಿಎಫ್‌ಸಿ ಅಡಿಯಲ್ಲಿ ಅನುಷ್ಠಾನಗೊಳ್ಳುತ್ತಿರುವ ಕುಸ್ಸೆಂಪ್ 24/7 ನಿರಂತರ ನೀರು ಸರಬರಾಜು ಯೋಜನೆ, ಕ್ಯುಮಿಪ್, ಎನ್‌ಕೆಯುಎಸ್‌ಐಪಿ ಯೋಜನೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಲೆಕ್ಕ–ಪತ್ರ ಶಾಖೆಯ ಲೆಕ್ಕಾಧೀಕ್ಷಕರಿಗೆ,



ಲೆಕ್ಕ–ಸಹಾಯಕರಿಗೆ ಹಾಗೂ ಡಾಟಾ ಎಂಟ್ರೀ ಆಪರೇಟರ್ ಅವರಿಗೆ ಆಯೋಜಿಸಲಾಗಿತ್ತು. ಕಾರ್ಯಾಗಾರದ ಉದ್ಘಾಟನೆಯನ್ನು ಯೋಜನಾ ಅನುಷ್ಠಾನ ಘಟಕದ ಅಧೀಕ್ಷಕ ಅಭಿಯಂತರ ತಿಮ್ಮಪ್ಪ ಇವರು ಮಾಡಿ ಮಾತನಾಡುತ್ತ, ಯಾವುದೇ ಯೋಜನೆಯ ಪ್ರಗತಿಗೆ ಹಾಗೂ ಅದರ ನಿರ್ವಹಣೆಗೆ ಲೆಕ್ಕ–ಶಾಖೆಯ ಅಧಿಕಾರಿಗಳ ಜವಾಬ್ದಾರಿ ಬಹಳ ಮಹತ್ವವಾದದ್ದು. ಕೆಯುಐಡಿಎಫ್‌ಸಿ ವತಿಯಿಂದ ಹಮ್ಮಿಕೊಂಡ ಸದರಿ ತರಬೇತಿಯು ಅತಿ ಮುಖ್ಯ ಹಾಗೂ ಅಗತ್ಯವಾಗಿದ್ದು, ಲೆಕ್ಕ–ಪತ್ರ ನಿರ್ವಹಣೆಗೆ ಸಂಬಂಧಿಸಿದ ವಿವಿಧ ಅಧಿವೇಶನಗಳಿದ್ದು ತರಬೇತಿಯ ಪ್ರಯೋಜನವನ್ನು ಪಡೆಯಲು ಕರೆ ನೀಡಿದರು.

ಕೆಯುಐಡಿಎಫ್‌ಸಿ ಕೇಂದ್ರ ಕಛೇರಿಯ ಉಪ ಪ್ರಧಾನ ವ್ಯವಸ್ಥಾಪಕರಾದ ಡಾ. ಪೂರ್ಣಿಮಾ ಎಂ.ಆರ್. ಕಾರ್ಯಾಗಾರವನ್ನು ಹಮ್ಮಿಕೊಂಡ ಉದ್ದೇಶ, ರೂಪುರೇಷೆಗಳು ಹಾಗೂ ಕಾರ್ಯಾಗಾರದಲ್ಲಿ ನಡೆಯುವ ವಿವಿಧ ಅಧಿವೇಶನಗಳ ಮಾಹಿತಿಯನ್ನು ನೀಡಿದರು.

ಕೆಯುಐಡಿಎಫ್‌ಸಿ ಕೇಂದ್ರ ಕಛೇರಿಯ ರಾಜೇಶ್ವರ್ ಎಚ್.ಎನ್., ಸಹ ಪ್ರಧಾನ ವ್ಯವಸ್ಥಾಪಕರು, ಹಾಗೂ ಸುನೀಲ ರೈ, ಸಹ ಪ್ರಬಂಧಕರು (ಏಡಿಬಿ) ಇವರು ಹಣಕಾಸು ಮತ್ತು ಲೆಕ್ಕಪತ್ರ, ಗುತ್ತಿಗೆ ಕರಾರು ಒಪ್ಪಂದ ನಿರ್ವಹಣೆ ಹಾಗೂ ಖರೀದಿ ಪ್ರಕ್ರಿಯೆಯ ಕುರಿತು ವಿವಿಧ ಅಧಿವೇಶನಗಳನ್ನು ನಡೆಸಿದರು.

## ಮಕ್ಕಳ ಕಳ್ಳಸಾಗಾಣೆ ಸಕ್ರಿಯ ಜಾಲ ಪತ್ತೆ

# ಅಲೆಮಾರಿಗಳ ಮಗು ಕದ್ದು ಸಿಕ್ಕಿಬಿದ್ದ ಖದೀಮರು

■ವಿಜಯಸಾಕ್ಷಿ ಸುದ್ದಿ, ತುಮಕೂರ



ಊರೂರು ತಿರುಗಿ ವ್ಯಾಪಾರ ಮಾಡುತ್ತಾ ಜೀವನ ನಡೆಸುತ್ತಿದ್ದ ಅಲೆಮಾರಿ ಕುಟುಂಬದ ದಂಪತಿಯ 11 ತಿಂಗಳ ಮಗು ಕಳವು ಪ್ರಕರಣದ ತನಿಖೆ ಕೈಗೆತ್ತಿಕೊಂಡಿದ್ದ ಪೊಲೀಸರು, ಇಡೀ ಜಿಲ್ಲೆಯಲ್ಲಿ ನಡೆಯುತ್ತಿದ್ದ ಮಕ್ಕಳ ಕಳ್ಳಸಾಗಾಣೆ ಜಾಲವನ್ನೆ ಪತ್ತೆ ಮಾಡಿದ್ದಾರೆ. ಈ ಪ್ರಕರಣದಿಂದ ತುಮಕೂರು ಜನತೆ ಬೆಚ್ಚಿಬಿದ್ದಿದ್ದು, ಈವರೆಗೆ ಐದು ಮಕ್ಕಳನ್ನು ಪೊಲೀಸರು ರಕ್ಷಣೆ ಮಾಡಿದ್ದಾರೆ.

ಅಲೆಮಾರಿ ಕುಟುಂಬದ ಮಗು ಕಳ್ಳತನ ಪ್ರಕರಣದ ತನಿಖೆಯು ತಿರುವು ಪಡೆದುಕೊಂಡಿದ್ದು, ಹಲವು ತಿಂಗಳುಗಳಿಂದ ಸಕ್ರಿಯವಾಗಿದ್ದ ಒಂದೇ ಗುಂಪು, ಬರೊಬ್ಬರಿ 9 ಮಕ್ಕಳನ್ನು ಕಿಡ್ನಾಪ್ ಮಾಡಿದ್ದಾರೆ. ಕದ್ದ ಮಕ್ಕಳನ್ನ 2 ರಿಂದ 3 ಲಕ್ಷ ರೂಪಾಯಿಗೆ ಮಕ್ಕಳಿಲ್ಲದ ದಂಪತಿಗೆ ಮಾರಾಟ ಮಾಡಿದ್ದಾರೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಶೋಕ್ ಕೆ.ವಿ ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ್ದಾರೆ.

ಕಳುವಾಗಿದ್ದ 9 ಮಕ್ಕಳ ಪೈಕಿ 5 ಮಕ್ಕಳನ್ನ ಪೊಲೀಸರು ರಕ್ಷಿಸಿದ್ದು, ಅದರಲ್ಲಿ 1 ಮಗು ಸಾವನ್ನಪ್ಪಿದೆ ಎಂದು ತಿಳಿದುಬಂದಿದೆ. ಇನ್ನುಳಿದ 3 ಮಕ್ಕಳಿಗಾಗಿ ತನಿಖಾ ತಂಡ ಶೋಧಕಾರ್ಯ ಮುಂದುವರಿಸಿದೆ.

ತುಮಕೂರು ಜಿಲ್ಲೆ ಗುಬ್ಬಿ ಪೊಲೀಸ್ ಠಾಣೆಯಲ್ಲಿ ಜುಲೈ ಒಂಬತ್ತರಂದು ಮಗು ಕಳ್ಳತನ ಪ್ರಕರಣ ದಾಖಲಾಗಿತ್ತು. ತಾಲೂಕಿನ ಚೇಳೂರು ಮೂಲದ ಅಲೆಮಾರಿ ಕುಟುಂಬದ ದಂಪತಿಗಳು ಸುತ್ತಮುತ್ತಲಿನ ಹಳ್ಳಿಗಳಲ್ಲಿ ತಲೆಕೂದಲು ಸಂಗ್ರಹಿಸಿ, ಪಾತ್ರೆ–ಪಡಗ ವ್ಯಾಪಾರ ನಡೆಸುತ್ತಾ ಜೀವನ ಸಾಗಿಸುತ್ತಿದ್ರು. ಅದೇ ರೀತಿ ವ್ಯಾಪಾರ ಮುಗಿಸಿ ಇದೇ ಜೂನ್ 9 ರ ರಾತ್ರಿ ಗುಬ್ಬಿ ಪಟ್ಟಣದ ಚನ್ನಬಸವೇಶ್ವರ ದೇವಸ್ಥಾನದ ಬಳಿ ಮಲಗಿದ್ದಾಗ, ಬೆಳಗಾಗುವಷ್ಟರಲ್ಲಿ ದಂಪತಿಗಳ 11 ತಿಂಗಳ ರಾಕಿ ಎಂಬ ಮಗು ನಾಪತ್ತೆಯಾಗಿದ್ದ. ಈ ಘಟನೆ ಸಂಬಂಧ ಗುಬ್ಬಿ ಪೊಲೀಸ್ ಠಾಣೆಗೆ ಮಗುವಿನ ಪೋಷಕರು ದೂರು ನೀಡಿದ್ದರು.

ಮಕ್ಕಳಿಲ್ಲದ ದಂಪತಿಗಳನ್ನ ಟಾರ್ಗೆಟ್ ಮಾಡುತ್ತಿದ್ದ ಈ ಮಕ್ಕಳ ಕಳ್ಳರ ಗ್ಯಾಂಗ್, ಗರ್ಭ ಧರಿಸಿದ ಅವಿವಾಹಿತ ಯುವತಿಯರಿಂದ ಮಕ್ಕಳನ್ನ ಖರೀದಿ ಮಾಡುತ್ತಿದ್ದರು ಎನ್ನಲಾಗಿದೆ. ಜತೆಗೆ, ಮಕ್ಕಳ ಕಳ್ಳತನಕ್ಕೂ ಇಳಿದಿದ್ದರು. ಸದ್ಯ ಪ್ರಕರಣ ಸಂಬಂಧ 7 ಜನ ಆರೋಪಿಗಳ ಗುಬ್ಬಿ ಪೊಲೀಸರು ಬಂಧಿಸಿದ್ದಾರೆ.

# ಬೆಳೆ ಸಮೀಕ್ಷೆ ದಾಖಲಿಸಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

2024–25ನೇ ಸಾಲಿನ ಮುಂಗಾರು ಹಂಗಾಮಿನ ಬೆಳೆ ಸಮೀಕ್ಷೆ ಈಗಾಗಲೇ ಪ್ರಾರಂಭವಾಗಿದ್ದು, ರೈತರು ತಾವು ಬೆಳೆದ ಬೆಳೆಯ ವಿವರಗಳನ್ನು ಆ್ಯಪ್ ಮೂಲಕ ದಾಖಲಿಸಬಹುದಾಗಿದೆ ಎಂದು ತಾಲೂಕಾ ಸಹಾಯಕ ಕೃಷಿ ನಿರ್ದೇಶಕ ರೇವಣಪ್ಪ ಮನಗೂಳಿ ತಿಳಿಸಿದ್ದಾರೆ.

ಈ ಕುರಿತು ಮಾಹಿತಿ ನೀಡಿರುವ ಅವರು, ರೈತರು ಗೂಗಲ್ ಪ್ಲೇಸ್ಟೋರ್‌ನಿಂದ 'ಮುಂಗಾರು ರೈತರ ಬೆಳೆ ಸಮೀಕ್ಷೆ 2024'ನ್ನು ಡೌನ್‌ಲೋಡ್ ಮಾಡಿಕೊಂಡು ಬೆಳೆ ವಿವರಗಳನ್ನು ದಾಖಲಿಬಹುದಾಗಿದೆ. ರೈತರು ವಿವರಗಳನ್ನು ಸರಿಯಾಗಿ ದಾಖಲಿಸುವದರಿಂದ ಕನಿಷ್ಠ ಬೆಂಬಲ ಬೆಲೆ ಯೋಜನೆ, ಬೆಳೆ ವಿಮೆ ಯೋಜನೆ, ಅತಿವೃಷ್ಟಿ, ಅನಾವೃಷ್ಟಿ ಬೆಳೆ ಹಾನಿ ಪರಿಹಾರ ಪಡೆಯಲು ಪಹಣಿಯಲ್ಲಿ ದಾಖಲಿಸಲು ಇದು ಹೆಚ್ಚು ಅನೂಕೂಲವಾಗಿದೆ. ಆದ್ದರಿಂದ ರೈತರು ತ್ವರಿತವಾಗಿ ಬೆಳೆ ಸಮೀಕ್ಷೆ ಆ್ಯಪ್ ಮೂಲಕ ದಾಖಲಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕೆಂದು ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಕಂದಾಯ, ತೋಟಗಾರಿಕೆ, ಕೃಷಿ ಅಧಿಕಾರಿಗಳನ್ನು ಸಂಪರ್ಕಿಸಬಹುದು, ಟೋಲ್ ಫ್ರೀ ನಂ–18004253553ಗೆ ಕರೆ ಮಾಡಬಹುದಾಗಿದೆ ಎಂದು ತಿಳಿಸಿದ್ದಾರೆ.

# ಪೋಕ್ಸೋ ಪ್ರಕರಣ: ಯಡಿಯೂರಪ್ಪ ಸೇರಿದಂತೆ ಮೂವರ ವಿರುದ್ಧ ಆರೋಪಪಟ್ಟಿ ಸಲ್ಲಿಸಿದ ಸಿಐಡಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಪೋಕ್ಸೋ ಪ್ರಕರಣದಲ್ಲಿ ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ಅವರಿಗೆ ಹಿನ್ನಡೆಯಾಗಿದ್ದು, ರಾಜ್ಯ ಪೊಲೀಸ್ ಅಪರಾಧ ತನಿಖಾ ಇಲಾಖೆ (ಸಿಐಡಿ) ಅವರು ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣೆ (ಪೋಕ್ಸೊ) ಕಾಯ್ದೆಯಡಿಯಲ್ಲಿ ದಾಖಲಾಗಿರುವ ಪ್ರಕರಣದಲ್ಲಿ ಬಿಎಸ್‌ವೈ ಸೇರಿದಂತೆ ಇತರ ಮೂವರನ್ನು ಹೆಸರಿಸಿ ಆರೋಪಪಟ್ಟಿ ಸಲ್ಲಿಸಿದ್ದಾರೆ.



2015ರಲ್ಲಿ 17 ವರ್ಷದ ಬಾಲಕಿಯ ಮೇಲೆ ನಡೆದ ಲೈಂಗಿಕ ದೌರ್ಜನ್ಯ ಪ್ರಕರಣದಲ್ಲಿ ಸಹಾಯ ಪಡೆಯಲು ಆಕೆಯ ತಾಯಿ ಈ ವರ್ಷದ ಆರಂಭದಲ್ಲಿ ಯಡಿಯೂರಪ್ಪ ಮನೆಗೆ ತೆರಳಿದ್ದರು, ಮಾಜಿ ಸಿಎಂ ಭೇಟಿ ಸಂದರ್ಭದಲ್ಲಿ ಮಗಳನ್ನು ಅನುಚಿತವಾಗಿ ಸ್ಪರ್ಶಿಸಿದ ಆರೋಪ ಅವರ ಮೇಲಿದೆ. ಸಂತ್ರಸ್ತೆ ತಾಯಿ ಸಲ್ಲಿಸಿದ ದೂರಿನ ಆಧಾರದಲ್ಲಿ ಮಾರ್ಚ್‌ನಲ್ಲಿ ಪೋಕ್ಸೊ ಪ್ರಕರಣ ದಾಖಲಾಗಿತ್ತು.

ಮೇ ತಿಂಗಳಲ್ಲಿ, ಕ್ಯಾನ್ಸರ್‌ನಿಂದ ಬಳಲುತ್ತಿದ್ದ ಸಂತ್ರಸ್ತ ಬಾಲಕಿಯ ತಾಯಿಯು, ಉಸಿರಾಟದ ತೊಂದರೆಯಿಂದ ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದರು. ನಂತರ, ಸಂತ್ರಸ್ತೆಯ ಸಹೋದರ ಕರ್ನಾಟಕ ಹೈಕೋರ್ಟ್‌ನ ಮೊರೆ ಹೋಗಿದ್ದರು ಮತ್ತು ತನಿಖೆಯಲ್ಲಿ ಯಾವುದೇ ಪ್ರಗತಿಯಾಗಿಲ್ಲ ಎಂದು ದೂರಿದರು.

ಬಸವದಳದ ಶರಣ ಸಂಗಮ ಕಾರ್ಯಕ್ರಮದಲ್ಲಿ ಕೆ.ಎಸ್. ಪಲ್ಲೇದ ಅಭಿಪ್ರಾಯ

# ಸಂತೃಪ್ತ ಬದುಕಿಗೆ ಶಿವಯೋಗ ಸಾಧನೆ ಅವಶ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಮೂಲತಃ ನಾವೆಲ್ಲ ಆಶಾ ಜೀವಿಗಳು. ಆಶೆಗಳಿಲ್ಲದೆ ನಮ್ಮ ಬದುಕಿಲ್ಲ, ಆಶೆಯುಕ್ತ ಬದುಕಿನಲ್ಲಿ ಬರುವ ಸುಖ–ದುಃಖ, ಸ್ತುತಿ–ನಿಂದೆ, ಭಯ, ಕೋಪ, ಆತಂಕಗಳ ಛಾಯೆಯಲ್ಲಿ ನಾವಿದ್ದೇವೆ. ಶಾಂತಿ, ನೆಮ್ಮದಿ, ತೃಪ್ತಿಗಳಿಗಾಗಿ ಸದಾ ಹಾತೊರೆಯುತ್ತಿದ್ದೇವೆ. ಇವು ನಮಗೆ ದೊರೆಯಬೇಕಾದರೆ ನಾವು ಶಿವಯೋಗ ಸಾಧಕರಾಗಬೇಕು. ಶಿವಯೋಗ ಸಾಧನೆಯಿಂದ ಸಮಚಿತ್ತ, ಶಿವಚಿತ್ತ ಮತ್ತು ಶರಣಾಗತಿ ಎಂಬ ಮೂರು ಮಹತ್ತರವಾದ ಮೌಲ್ಯಗಳು ದೊರೆಯುವವು. ಇದರಿಂದ ನಾವು ಬದುಕಿನಲ್ಲಿ ಸದಾ ತೃಪ್ತರಾಗಿರಲು ಸಾಧ್ಯವಾಗುವುದು ಎಂದು ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಅಭಿಪ್ರಾಯ ವ್ಯಕ್ತಪಡಿಸಿದರು.

ಅವರು ಶಿವಾನಂದ ನಗರದಲ್ಲಿ ಬಸವ ಸಮುದಾಯ ಭವನದಲ್ಲಿ ಬಸವದಳದ 1599ನೇ ಶರಣ ಸಂಗಮದಲ್ಲಿ 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಯೋಗ ಮತ್ತು ಶಿವಯೋಗ ಕುರಿತು ಉಪನ್ಯಾಸ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ ಮಾತನಾಡಿದರು.



ಹಠಯೋಗ, ಲಯಯೋಗ, ಮಂತ್ರಯೋಗ ಇನ್ನಿತರೆ ಯೋಗಗಳು ಶಿವಯೋಗದಲ್ಲಿ ಸಮ್ಮಿಳಿತವಾಗಿವೆ. ಹೀಗಾಗಿ ಶಿವಯೋಗ ಒಂದು ಪೂರ್ಣ ಯೋಗವಾಗಿದೆ. ಯೋಗ ಆಚರಣೆಗೆ ಸಹಜ, ಸರಳ ಯೋಗವಾಗಿದೆ. ಪ್ರಕೃತಿ ಬಿಟ್ಟು ಯೋಗವಿಲ್ಲ, ಮಾನವ ನಿತ್ಯ ಕ್ರಮಬದ್ಧವಾಗಿ ಜೀವನ ನಡೆಸುವುದೇ ಯೋಗವಾಗಿದೆ. ಸ್ಥಿರವಾಗಿ, ಸುಖಕರವಾಗಿ ಕುಳಿತುಕೊಳ್ಳುವುದೇ ಆಸನವಾದರೆ, ಮನಸ್ಸಿನ ಏಕಾಗ್ರತೆಗಾಗಿ ಪ್ರಾರ್ಥನೆಯನ್ನು ಮಾಡಬೇಕೆಂದು ತಿಳಿಸಿದರು.

ಅತಿಥಿಗಳಾಗಿ ಆಗಮಿಸಿದ ಎಸ್.ಪಿ. ಹೊಂಬಳ ಸಂದರ್ಭೋಚಿತವಾಗಿ ಮಾತನಾಡಿದರು. ಅಧ್ಯಕ್ಷತೆ ವಹಿಸಿದ ವ್ಹಿ.ಕೆ. ಕರಿಗೌಡ್ರ ಮಾತನಾಡಿ, 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಪ್ರಯುಕ್ತ ನಾಡಿನಾದ್ಯಂತ ವಿವಿಧ ಕಾರ್ಯಕ್ರಮಗಳು ಜರುಗಿವೆ. ನಾವು ಕೂಡ ಯೋಗ ಕುರಿತು ಉಪನ್ಯಾಸ ಕಾರ್ಯಕ್ರಮ ಏರ್ಪಡಿಸಿ ಯೋಗ ದಿನಾಚರಣೆಯಲ್ಲಿ ಪಾಲ್ಗೊಂಡಿರುವದು ನಮ್ಮೆಲ್ಲರಿಗೆ ಸಂತೋಷ ತಂದಿದೆ. ಈ ನಿಟ್ಟಿನಲ್ಲಿ ಬಸವದಳದಿಂದ ಶಿವಯೋಗದ ಮಹತ್ವವನ್ನು ತಿಳಿಸಲು ಘಟಕಗಳನ್ನು ರೂಪಿಸುವ ಯೋಚನೆ ಇದೆ. ಈ ಕಾರ್ಯಕ್ಕೆ ತಮ್ಮೆಲ್ಲರ ಸಹಕಾರ ಇರಲಿ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಪ್ರಾ. ಕೆ.ಎಚ್. ಬೇಲೂರ ಮಾತನಾಡಿ, ಯಾವದೇ ಯೋಗ ಅವುಗಳ ಗುರಿ ಉದ್ದೇಶಗಳಲ್ಲಿ ಕೂಡವಿಕೆ ಮುಖ್ಯವಾಗಿದೆ. ಬಸವಣ್ಣನವರ ವಾಣಿಯಂತೆ ಇವನಾರವ ಇವನಾರವ ಎನ್ನದೆ ಇವ ನಮ್ಮವ ಇವ ನಮ್ಮವ ಎಂಬ ಭಾವ ನಮ್ಮದಾಗಿರಬೇಕು. ಆಗ ನಾವು ಸಮಾಜಮುಖಿಯಾಗಿರಲು ಸಾಧ್ಯವಾಗುವುದೆಂದು ಹೇಳಿದರು.

ಪ್ರಾರಂಭದಲ್ಲಿ ಸಾಮೂಹಿಕ ವಚನ ಪ್ರಾರ್ಥನೆಯನ್ನು ಶರಣೆ ಶಿಲ್ಪಾ ವಿ.ಬಡಿಗಣ್ಣವರ ಮಾಡಿದರು. ಶರಣ ಎನ್. ಎಚ್. ಹಿರೇಸಕ್ಕರಗೌಡ್ರ ಸ್ವಾಗತಿಸಿದರು. ಪ್ರಾಸ್ತಾವಿಕವಾಗಿ ಶರಣ ಪ್ರಕಾಶ ಅಸುಂಡಿಯವರು ಮಾತನಾಡಿದರು. ಹಿರಿಯ ಸಾಹಿತಿ, ಸಂಶೋಧಕಿ ಕಮಲಾ ಹಂಪನಾ ಅವರು ಇತ್ತೀಚಿಗೆ ನಿಧನರಾದ ಹಿನ್ನೆಲೆಯಲ್ಲಿ ಶ್ರದ್ಧಾಂಜಲಿ ಅರ್ಪಿಸಲಾಯಿತು. ಕೊನೆಯಲ್ಲಿ ಶರಣು ಸಮರ್ಪಣೆಯನ್ನು ಎಸ್.ಎ. ಮುಗದ ಮಾಡಿದರು. ವಚನ ಮಂಗಲದೊಂದಿಗೆ ಕಾರ್ಯಕ್ರಮ ಸಂಪನ್ನಗೊಂಡಿತು.

# ಚು.ಸಾ.ಪ ಜಿಲ್ಲಾ ಸಮಿತಿ ರಚನೆಯ ಸಭೆ



■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಗದಗಿನ ಮುಳುಗುಂದ ನಾಕಾದಲ್ಲಿರುವ ಶ್ರೀ ಅಡವೀಂದ್ರಸ್ವಾಮಿಗಳ ಮಠದಲ್ಲಿ ಕ.ಚು.ಸಾ.ಪ. ಗದಗ ಜಿಲ್ಲಾಧ್ಯಕ್ಷೆ ಶೋಭಾ ಮೇಟಿ ಅವರ ಅಧ್ಯಕ್ಷತೆಯಲ್ಲಿ ಇತ್ತೀಚೆಗೆ ಕರ್ನಾಟಕ ಚುಟುಕು ಸಾಹಿತ್ಯ ಪರಿಷತ್ ಗದಗ ಜಿಲ್ಲಾ ಸಮಿತಿ ರಚನೆಯ ಪೂರ್ವಭಾವಿ ಸಭೆ ಜರುಗಿತು.

ಸಭೆಯ ಆರಂಭದಲ್ಲಿ ಕನ್ನಡ ನಾಡಿನ ಹೆಮ್ಮೆಯ ಕವಯಿತ್ರಿ, ಬರಹಗಾರ್ತಿ ನಾಡೋಜ ಕಮಲಾಹಂಪ ನಾಗರಾಜಯ್ಯ ಅವರ ಶ್ರದ್ಧಾಂಜಲಿ ಸಭೆಯನ್ನು ನಡೆಸಿ ಮೌನಾಚರಣೆ ಮಾಡಲಾಯಿತು.

ನಂತರ ಸಭೆಯಲ್ಲಿ ಕರ್ನಾಟಕ ಚುಟುಕು ಸಾಹಿತ್ಯ ಪರಿಷತ್ತಿನ ಗದಗ ಜಿಲ್ಲಾ ಉಪಾಧ್ಯಕ್ಷರಾಗಿ ಡಾ.ರಾಜೇಂದ್ರ ಗಡಾದ, ಜಿಲ್ಲಾ ಸಮಿತಿಯ ಪ್ರಧಾನ ಕಾರ್ಯದರ್ಶಿಯಾಗಿ ಸಚಿನ್ ಒಡೆಯರ್ ಹಾಗೂ ಖಜಾಂಚಿಯಾಗಿ ಪತ್ರಕರ್ತ ಸಂತೋಷ ಮುರಡಿ ಅವರನ್ನು ಆಯ್ಕೆ ಮಾಡಲಾಯಿತು. ಎಲ್ಲ ತಾಲೂಕುಗಳ ಸಮಿತಿಗಳು ರಚನೆಯಾದ ನಂತರ ಜಿಲ್ಲಾ ಸಮಿತಿಯ ಇನ್ನುಳಿದ ಸ್ಥಾನಗಳನ್ನು ಆಯ್ಕೆ ಮಾಡಲಾಗುವುದು ಎಂದು ಶೋಭಾ ಮೇಟಿ ತಿಳಿಸಿದರು.

ಸಭೆಯಲ್ಲಿ ಪ್ರೇಮಾ ಗುಳಗೌಡರ, ವಿ.ವಿ. ಹಿರೇಮಠ, ಮಂಜುಳಾ ಇಟಗಿ, ಚಂದ್ರಕಲಾ ಇಟಗಿಮಠ, ಗೀತಾ ಹೂಗಾರ, ಪಂಚಯ್ಯ ಹಿರೇಮಠ, ಡಾ. ಕಲ್ಲೇಶ, ಮುರಶಿಳ್ಳಿನ್, ಡಾ.ಅಶೋಕ ಮತ್ತಿಗಟ್ಟಿ, ಕೊಟ್ರೇಶ ಜವಳಿ, ಡೋಣಿ ಮಂಜುನಾಥ, ಭಾಗ್ಯಶ್ರೀ ಹುರಕಡ್ಲಿ, ರಮಾಬಸು, ನಾಗೇಶ ನಾಯಕ್, ಲತಾ ಮಾಂಡ್ರೆ, ಸುಮಂಗಲಾ ಹದಡಿ, ಸಿ.ಆರ್. ಗಡಾದ ಇತರರು ಇದ್ದರು.

# ಸೈನಿಕರ ಕಾರ್ಯ ಶ್ಲಾಘನೀಯ



■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಈ ದೇಶವನ್ನು ರಕ್ಷಿಸುವ ಸೈನಿಕರನ್ನು ಮತ್ತು ಈ ಸಮಾಜದ ಎಲ್ಲರಿಗೂ ತಮ್ಮ ಜೀವನ ಅನುಭವವನ್ನು ತಿಳಿಸುವ ಅಮೂಲ್ಯ ರತ್ನಗಳಾದ ಹಿರಿಯ ನಾಗರಿಕರನ್ನು ಗುರುತಿಸಿ ಸನ್ಮಾನಿಸುತ್ತಿರುವ ಕೊಟ್ಟೂರೇಶ್ವರ ಮಠದ ಕಾರ್ಯ ಶ್ಲಾಘನೀಯ ಎಂದು ಕೊಪ್ಪಳದ ಶಿಕ್ಷಕ ಶರಣಯ್ಯ ಹಿರೇಮಠ ಹೇಳಿದರು.

ಸಮೀಪದ ಕೊಟ್ಟೂರೇಶ್ವರ ಮಠದ ಜಾತ್ರಾ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಕಾರ್ಗಿಲ್ ವಿಜಯೋತ್ಸವದ ನಿಮಿತ್ತ ಮಾಜಿ ಸೈನಿಕರು ಹಾಗೂ 80 ವರ್ಷ ಮೇಲ್ಪಟ್ಟ ಹಿರಿಯರ ಸನ್ಮಾನ ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಾಡಿದರು.

ಮಳೆ, ಚಳಿ, ಬಿಸಿಲು, ಗಾಳಿ ಎನ್ನದೇ ದೇಶ ರಕ್ಷಣೆಯಲ್ಲಿ ತಮ್ಮ ಜೀವವನ್ನು ಒತ್ತೆ ಇಟ್ಟು ಸೇವೆ ಸಲ್ಲಿಸಿದ ಸೈನಿಕರ ಕಾರ್ಯ ಶ್ಲಾಘನೀಯ. ನಮ್ಮೆಲ್ಲರ ಭವಿಷ್ಯಕ್ಕೆ ತಮ್ಮ ಅನುಭವವನ್ನು ಧಾರೆ ಎರೆಯುವ ಜೀವಗಳು ಅಮೂಲ್ಯ ರತ್ನಗಳು ಇದ್ದಂತೆ. ಅವರ ಆರೋಗ್ಯದ ಬಗ್ಗೆ ನಾವೆಲ್ಲರೂ ಕಾಳಜಿ ವಹಿಸಬೇಕು ಎಂದರು.

ಮಾಜಿ ಸೈನಿಕ ಮಹಾಂತೇಶ ಲಕ್ಕುಂಡಿ ಮಾತನಾಡಿ, ದೇಶಕ್ಕೆ ಅನ್ನ ನೀಡುವ ರೈತ ಮತ್ತು ದೇಶವನ್ನು ರಕ್ಷಣೆ ಮಾಡುವ ಸೈನಿಕರನ್ನು ಗುರುತಿಸಿ ಸನ್ಮಾನಿಸುತ್ತಿರುವ ಶ್ರೀ ಮಠದ ಕಾರ್ಯ ಶ್ಲಾಘನೀಯ ಎಂದರು.

ಡಾ. ಕೊಟ್ಟೂರೇಶ್ವರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು. ಬಸವರಾಜ ಇಲಕಲ್, ಅಮರಗುಂಡಪ್ಪನವರ ಅರಳಿ, ಮಲ್ಲಿಕಾರ್ಜುನಯ್ಯ ಶಶಿಮಠ, ಮಹೇಶ ಕುಂಬಾರ ಹಾಗೂ ಹಳ್ಳಿಗುಡಿ ಗ್ರಾಮದ ಹಿರಿಯರು ಉಪಸ್ಥಿತರಿದ್ದರು.

ಕೆ.ಬಿ. ವೀರಾಪೂರ ಹಾಗೂ ನಾಗೇಂದ್ರ ಅರ್ಕಸಾಲಿ ಪ್ರಾರ್ಥಿಸಿದರು. ಶಿಕ್ಷಕ ಸಿದ್ದಲಿಂಗಯ್ಯ ಹಿರೇಮಠ ಸ್ವಾಗತಿಸಿದರು. ಕೆ.ಬಿ. ಕೊಣ್ಣೂರು ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ. ಎಸ್.ಸಿ. ಸರ್ವಿ ವಂದಿಸಿದರು.

ಬಿಜೆಪಿ ಗದಗ ಜಿಲ್ಲಾ, ನಗರ ಮಂಡಲ ವತಿಯಿಂದ ಕೃಷ್ಣಾ ಪಿ.ಹೊಂಬಾಳಿಯವರಿಗೆ ಸನ್ಮಾನ

# ದೇಶ ಮರೆಯದ ಕರಾಳ ದಿನದ ನೆನಪು

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಹಾಗೂ ನಗರ ಮಂಡಲ ವತಿಯಿಂದ 50 ವರ್ಷಗಳ ಹಿಂದೆ ಘೋಷಣೆಯಾಗಿದ್ದ ತುರ್ತು ಪರಿಸ್ಥಿತಿಯಲ್ಲಿ ಬಂಧನಕ್ಕೊಳಗಾದ ಕೃಷ್ಣಾ ಪಿ.ಹೊಂಬಾಳಿಯವರ ಮನೆಗೆ ತೆರಳಿ ಅವರನ್ನು ಸನ್ಮಾನಿಸಿ ಗೌರವಿಸಿ ಕರಾಳ ದಿನವನ್ನು ನೆನಪಿಸುವ ಕಾರ್ಯವನ್ನು ಮಾಡಿದರು.



ಈ ಸಂದರ್ಭದಲ್ಲಿ ತುರ್ತು ಪರಿಸ್ಥಿತಿಯ ಕರಾಳ ದಿನದ ನೆನಪುಗಳನ್ನು ಪ್ರಮುಖರಾದ ನಾಗರಾಜ ಕುಲಕರ್ಣಿ, ಜಗನ್ನಾಥಸಾ ಭಾಂಡಗೆ, ಬಿ.ಎಚ್. ಲದ್ವಾ ಅವರು ಕೃಷ್ಣಾ ಹೊಂಬಾಳಿಯವರ ಅಂದಿನ ದಿನಗಳನ್ನ ಎಳೆ ಎಳೆಯಾಗಿ ತಿಳಿಸಿಕೊಟ್ಟರು.

ಜಿಲ್ಲಾಧ್ಯಕ್ಷ ರಾಜು ಕುರುಡಗಿ ಮಾತನಾಡಿ, ಕರಾಳ ದಿನವನ್ನು ಬಿಜೆಪಿ ರಾಜ್ಯ ಅಧ್ಯಕ್ಷರ ಆದೇಶದ ಮೇರೆಗೆ ನಮ್ಮ ಜಿಲ್ಲೆಯ 9 ಮಂಡಲಗಳಲ್ಲಿ ಅಂದಿನ ತುರ್ತು ಪರಿಸ್ಥಿತಿಯಲ್ಲಿ ಬಂಧನಕ್ಕೊಳಗಾದ ವ್ಯಕ್ತಿಗಳ ಮನೆಗೆ ತೆರಳಿ ಅವರನ್ನು ಗೌರವಿಸುವುದರ ಮೂಲಕ ಅವರ ಅನುಭವವನ್ನು ನಮ್ಮೆಲ್ಲ ಬಿಜೆಪಿ ಕಾರ್ಯಕರ್ತರಿಗೆ ತಿಳಿಸುವ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದರು.

ಜಿಲ್ಲಾಧ್ಯಕ್ಷರು ಗದಗ ನಗರದ ಕೃಷ್ಣಾ ಹೊಂಬಾಳಿರವರ ಮನೆಯಲ್ಲಿ ಅವರನ್ನು ಗದಗ ನಗರ ಮಂಡಲ ಬಿಜೆಪಿ ಪ್ರಮುಖರು, ಚುನಾಯಿತ ಪ್ರತಿನಿಧಿಗಳು, ಕಾರ್ಯಕರ್ತರೊಂದಿಗೆ ಅವರ ಅನುಭವವನ್ನು ಹಂಚಿಕೊಂಡು ಈ ದಿನವನ್ನು ಭಾರತದಲ್ಲಿ ಎಂದಿಗೂ ಮರೆಯಲಾಗದದಿನವೆಂದರು.

ಈ ಸಂದರ್ಭದಲ್ಲಿ ನಗರದ ಅಧ್ಯಕ್ಷರಾದ ಅನಿಲ ಅಬ್ಬಿಗೇರಿ ಕಾರ್ಯಕ್ರಮ ನಿರೂಪಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ನಗರಸಭಾ ಸದಸ್ಯ ಮುತ್ತು ಮುಶಿಗೇರಿ, ಶಂಕರ ಕಾಕಿ, ಅಶೋಕ ಸಂಕಣ್ಣವರ, ಶಶಿಧರ ದಿಂಡೂರ, ಸಂತೋಷ ಅಕ್ಕಿ, ವೆಂಕಟೇಶ ಹಬೀಬ, ಬಸವರಾಜ ಶಿರಿ, ದೇವಪ್ಪ ಗೊಟೂರ, ಸುರೇಶ ಚಿತ್ತರಗಿ, ಮಹೇಶ ಕೋಟಿ, ಶೈಲೇಶ ಬಾಗಮರ, ಕಮಲೇಶ ಜೈನ್, ಅಶ್ವಿನಿ ಜಗತಾಪ್, ವಿಜಯಲಕ್ಷ್ಮೀ ಮಾನ್ವಿ, ಪದ್ಮಿನಿ ಮುತ್ತಲದಿನ್ನಿ, ರತ್ನಾ ಕುರಗೋಡ, ಜಯಶ್ರೀ ಅಣ್ಣಿಗೇರಿ, ಶೃತಿ ಮುಶಿಗೇರಿ, ಮಾಂತೇಶ ಬಾತಾಖಾನಿ, ಮಂಜುನಾಥ ಶಾಂತಗೇರಿ, ರಾಜು ಉಮಚಗಿ, ಶಶಿಧರ, ಅವಿನಾಶ ಹೊನಗುಡಿ, ವಿನೋದ ಹಂಸನೂರ ಸೇರಿದಂತೆ ಪ್ರಮುಖರು, ಕಾರ್ಯಕರ್ತರು ಉಪಸ್ಥಿತರಿದ್ದರು.

ಕಾರ್ಯಾಚರಣೆ ನಡೆಸದೇ ಸಂಪೂರ್ಣವಾಗಿ ಸ್ಥಗಿತಗೊಂಡಿರುವ ಸಂಘ-ಸಂಸ್ಥೆಗಳು

# ಸಹಕಾರ ಸಂಘಗಳ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ–ಡ.ಸ. ಹಡಗಲಿ–ನಂ–2, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ನಿ, ಸವಡಿನಂ–2 ತಾ:ರೋಣ, ಕಟ್ಟಡ ನಿರ್ಮಾಣ ಕಾರ್ಮಿಕರ ಪತ್ತಿನ ಸಹಕಾರ ಸಂಘ ನಿ, ಗದಗ, ದಿ ಬಸವೇಶ್ವರ ಕೋ–ಅಪ. ಕ್ರೆಡಿಟ್ ಸೊಸಾಯಿಟಿ ಲಿ. ಮುಂಡರಗಿ, ಶ್ರೀ ಲಕ್ಷ್ಮೀವೆಂಕಟೇಶ್ವರ ಕ್ರೆಡಿಟ್ ಮಹಿಳಾ ಕೋ–ಆಪ್ ಸೊಸೈಟಿ ನಿ, ವೆಂಕಟಾಪೂರ, ನರಗುಂದ ಬಾಬಾಸಾಹೇಬ ಕೋ–ಅಪ ಕ್ರೆಡಿಟ್ ಸೊಸಾಯಿಟಿ ನರಗುಂದ, ಶ್ರೀ ಜಗದ್ಗುರು ಮೌನೇಶ್ವರ ಕೋ–ಆಪ್ ಕ್ರೆಡಿಟ್ ಸೊಸೈಟಿ ನಿ, ನರಗುಂದ, ನೇತ್ರಾವತಿ ಪತ್ತಿನ ಮಹಿಳಾ ಸಹಕಾರ ಸಂಘ ನಿ ಗಜೇಂದ್ರಗಡ, ಶ್ರೀ ಗಂಗಾಧರ ಮರ್ಚಂಟ್ಸ್ ಕೋಆಪ್ ಕ್ರೆಡಿಟ್ ಸೊಸೈಟಿ ಶಿಗ್ಲಿ, ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘ ನಿ. ಹರ್ತಿ, ಎಣ್ಣೆ ಬೀಜ ಬೆಳೆಗಾರರ ಸಹಕಾರ ಸಂಘ ನಿ. ಬೆಳವಣಕಿ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಸಿಬ್ಬಂದಿ ಸಹಕಾರ ಉಪಹಾರ, ನಿ. ಗದಗ, ಮೌಲಾನ ಆಜಾದ ವಿವಿದೋದ್ದೇಶಗಳ ಸಹಕಾರ ಸಂಘ ನಿ, ಗದಗ, ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ನಿ, ಮದಗಾನೂರ, ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ನಿ. ಬೋಪಳಾಪೂರ ಸಹಕಾರ ಸಂಘಗಳು ಕಾರ್ಯಾಚರಣೆ ನಡೆಸದೇ ಸಂಪೂರ್ಣವಾಗಿ ಸ್ಥಗಿತಗೊಂಡಿರುತ್ತವೆ.

ಸುಮಾರು 5ರಿಂದ 10 ವರ್ಷಗಳಿಂದ ಲೆಕ್ಕ ಪರಿಶೋಧನೆಯಾಗಿರುವುದಿಲ್ಲ ಮತ್ತು ನಿಗದಿತ ಅವಧಿಯಲ್ಲಿ ಚುನಾವಣೆ ಜರುಗಿರುವುದಿಲ್ಲ. ಕರ್ನಾಟಕ ಸಹಕಾರ ಸಂಘಗಳ ಕಾಯ್ದೆ ಪ್ರಕಾರ ವಾರ್ಷಿಕ ಮಹಾಸಭೆಯನ್ನು ಜರುಗಿಸಿರುವುದಿಲ್ಲ. ಅಲ್ಲದೇ ಆಡಳಿತ ಮಂಡಳಿ ಸದಸ್ಯರು ಹಾಗೂ ಸಾಮಾನ್ಯ ಸದಸ್ಯರು ಕಾರ್ಯ ಚಟುವಟಿಕೆಗಳಿಗೆ ಆಸಕ್ತಿ ತೋರಿಸದೇ ಇರುವುದು ಕಂಡು ಬಂದಿದೆ. ಅಥಾವೆ ಪತ್ರಿಕೆಗಳು ಲಭ್ಯವಿರುವುದಿಲ್ಲ ಹಾಗೂ ಆಡಳಿತ ಮಂಡಳಿ ಸದಸ್ಯರ ವಿಳಾಸವು ಲಭ್ಯವಿಲ್ಲದ್ದರಿಂದ ಈ ಸಹಕಾರ ಸಂಘಗಳಿಗೆ ಸಂಬಂಧಪಟ್ಟವರು ಕಚೇರಿ ವೇಳೆಯಲ್ಲಿ ಸಹಕಾರ ಸಂಘಗಳ ಉಪನಿಬಂಧಕರು, ಗದಗ ಜಿಲ್ಲೆ, ಜಿಲ್ಲಾಡಳಿತ ಭವನ, ಕೊಠಡಿ ಸಂಖ್ಯೆ–125 ಗದಗ ಇವರನ್ನು ಭೇಟಿ ಮಾಡಬಹುದಾಗಿದೆ.

ಈ ಸಾರ್ವಜನಿಕ ಪತ್ರಿಕಾ ಪ್ರಕಟಣೆ ಹೊರಡಿಸಿದ 15 ದಿನಗಳೊಳಗಾಗಿ ಸಂಬಂಧಪಟ್ಟವರು ಬಾರದೇ ಹೋದಲ್ಲಿ ಸದರಿ ಸಹಕಾರ ಸಂಘಗಳನ್ನು ಸಮಾಪನೆ ಮಾಡಲು ಕ್ರಮವಿಡಲಾಗವುದು. ಮುಂದೆ ಬರುವ ಯಾವುದೇ ಹೊಣೆಗಾರಿಕೆಗಳಿಗೆ ಸಮಾಪನಾದಿಕಾರಿಗಳು ಹೊಣೆಗಾರರಾಗಿರುವುದಿಲ್ಲವೆಂದು ಸಹಕಾರ ಸಂಘಗಳ ಉಪನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯಾರ್ಥಿನಿಯರಿಗೆ ಶಿಷ್ಯವೇತನ ವಿತರಣೆ




■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ವಿಜಯಸಾಕ್ಷಿ ಸುದ್ದಿ, ಧಾರವಾಡ

ಉನ್ನತ ಭಾರತ ಅಭಿಯಾನ ಕೋಶ, ಸಮಾಜಕಾರ್ಯ ವಿಭಾಗ ಕ.ವಿ.ವಿ ಹಾಗೂ ಅವಸರ್ ಫೌಂಡೇಶನ್ ಟ್ರಸ್ಟ್ ಬೆಂಗಳೂರು ಇವರ ಜಂಟಿ ಸಹಯೋಗದಲ್ಲಿ ನಗರದ ಕರ್ನಾಟಕ ವಿಶ್ವವಿದ್ಯಾಲಯದ ವೇಮನ ಪೀಠದಲ್ಲಿ ವಿದ್ಯಾರ್ಥಿನಿಯರಿಗೆ ಶಿಷ್ಯವೇತನ ವಿತರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಉ.ಭಾ.ಅ ಅಡಿಯಲ್ಲಿ ಕವಿವಿ ದತ್ತು ಪಡೆದಿರುವ ಕಲಘಟಗಿ ತಾಲೂಕಿನ ಧುಮ್ಮವಾಡ, ಕುರುವಿನಕೊಪ್ಪ, ಗಂಭ್ಯಾಪುರ, ಜೋಡಳ್ಳಿ ಗ್ರಾಮಗಳಲ್ಲಿ 2024ನೇ ಸಾಲಿನ ಕಗಅ–1 ಪರೀಕ್ಷೆಯಲ್ಲಿ ಸಾಧನೆ ಮಾಡಿದ 10 ಜನ ವಿದ್ಯಾರ್ಥಿನಿಯರಿಗೆ ಶಿಷ್ಯವೇತನ ವಿತರಿಸಲಾಯಿತು.

ಹೆಣ್ಣು ಮಕ್ಕಳಿಗೆ ಶಿಷ್ಯವೇತನ ನೀಡುವುದರಿಂದ ಶೈಕ್ಷಣಿಕವಾಗಿ ಯಶಸನ್ನು ಸಾಧಿಸಲು ಸಾಧ್ಯವಾಗುತ್ತದೆ ಎಂದು ಕವಿವಿಯ ಕುಲಸಚಿವರು ಡಾ. ಎ. ಚನ್ನಪ್ಪ, ಸಮಾಜಕಾರ್ಯ ವಿಭಾಗದ ಮುಖ್ಯಸ್ಥ ಡಾ. ಸಂಗೀತಾ ಆರ್. ಮಾನೆ ಹಾಗೂ ಅವಸರ್ ಫೌಂಡೇಶನ್ ಟ್ರಸ್ಟಿನ ನಿರ್ದೇಶಕರಾದ ಮಾಳವಿಕಾ ಚತರ್ವೇದಿ ಮಾತನಾಡಿದರು. ಪ್ರತಿಭೆ, ಕೌಶಲ್ಯ ಹಾಗೂ ಜ್ಞಾನ ಇವೆಲ್ಲದರ ಜೊತೆ ಸಿಕ್ಕ ಅವಕಾಶವನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಉನ್ನತ ಭಾರತ ಅಭಿಯಾನ ಕೋಶದ ಸಂಯೋಜಕ ಡಾ. ಚೇತನ ಜೆ.ಡಿ ಹೇಳಿದರು.

ಕಾರ್ಯಕ್ರಮದಲ್ಲಿ ಉನ್ನತ ಭಾರತ ಅಭಿಯಾನ ಕೋಶದ ಮಾಜಿ ಸಂಯೋಜಕರು ಡಾ. ಎನ್. ರಾಮಾಂಜನೇಯಲು, ಡಾ. ಜೆ.ಎಂ. ಚಂದುನವರ, ಕಲ್ಯಾಣ ಚಕ್ರವರ್ತಿ, ಡಾ. ರೇಣುಕಾ. ಅಸಗಿ ಉಪಸ್ಥಿತರಿದ್ದರು.

# 'ವಿಕ್ಕಿ' ಸಿನಿಮಾ ಪೋಸ್ಟರ್ ಬಿಡುಗಡೆ

■ವಿಜಯಸಾಕ್ಷಿ ಸುದ್ದಿ, ಗದಗ

ಕೇಸರಿ ನಂದನ ಸಿನಿ ಕ್ರಿಯೇಶನ್ಸ್‌ರವರ ಹೆಮ್ಮೆಯ ದ್ವಿತೀಯ ಕಾಣಿಕೆ ನವನೀತ ಲಕ್ಷ್ಮೀ ನಿರ್ಮಾಣದ ದೀಪಕ ಎಸ್. ನಿರ್ದೇಶನದ ಉತ್ತರ ಕರ್ನಾಟಕದ ಹಾಸ್ಯ ಕಲಾವಿದರಾದ ರಾಜು ತಾಳಿಕೋಟಿಯವರ ಪುತ್ರ ಭರತರಾಜ ತಾಳಿಕೋಟಿ ಮೊಟ್ಟ ಮೊದಲ ಬಾರಿಗೆ ನಾಯಕ ನಟನಾಗಿ ಅಭಿನಯಿಸಿರುವ 'ವಿಕ್ಕಿ' ಚಲನಚಿತ್ರದ ಪೋಸ್ಟರ್‌ನ್ನು ಶ್ರೀ ವೀರೇಶ್ವರ ಪುಣ್ಯಾಶ್ರಮದಲ್ಲಿ ಪರಮಪೂಜ್ಯ ಕಲ್ಲಯ್ಯಜ್ಜನವರು ಬಿಡುಗಡೆ ಮಾಡಿ ಶುಭ ಹಾರೈಸಿದರು.




ಈ ಸಂದರ್ಭದಲ್ಲಿ ರಾಜು ತಾಳಿಕೋಟಿ ಮಾತನಾಡಿ, ನನ್ನ ಮಗ ಮೊದಲ ಬಾರಿಗೆ ನಾಯಕ ನಟನಾಗಿ ಅಭಿನಯಿಸಿರುವ ಚಿತ್ರವಾಗಿದೆ. ನನ್ನ ಮಗನ ಮೇಲೆಯೂ ಕೂಡಾ ಅದೇ ಪ್ರೀತಿ ಇರಲಿ. ನಮ್ಮ ಉತ್ತರ ಕರ್ನಾಟಕದ ಜನ ಹರಸಿ ಹಾರೈಸುತ್ತಾರೆ ಎಂಬ ನಂಬಿಕೆ ಇದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ್ರೇಮಾ ತಾಳಿಕೋಟಿ, ಎಫ್.ವ್ಹಿ. ಮರಿಗೌಡ್ರ, ಪ್ರಭಯ್ಯ ಹಿರೇಮಠ, ಸಾಹಿಲ್ ನವಲಗುಂದ, ಮಂಜುನಾಥ ಗುಳೇದಗುಡ್ಡ ಹಾಗೂ ಕಲಾವಿದರು ಉಪಸ್ಥಿತರಿದ್ದರು.

## ನಿಧನ ವಾರ್ತೆ



**ದೇವಕ್ಕ ಶಿವಪ್ಪ ಬೇಲೇರಿ**

**ಲಕ್ಕುಂಡಿ:** ಇಲ್ಲಿಯ ಅಂಬಕ್ಕಿ ಓಣಿಯ ನಿವಾಸಿ ದೇವಕ್ಕ ಶಿವಪ್ಪ ಬೇಲೇರಿ (86) ಬುಧವಾರ ನಿಧನರಾದರು. ಮೃತರು 7 ಜನ ಪುತ್ರರು, 4 ಜನ ಪುತ್ರಿಯರು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ.

# ಲಕ್ಷ್ಮರಸನ ಕರ್ಮಭೂಮಿ ಲಕ್ಷ್ಮೇಶ್ವರ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಥಮ ಕಲ್ಪದಲ್ಲಿ ಶ್ರೀಹರಿಯಿಂದ ನಿರ್ಮಿತವಾಗಿ 'ವಿಷ್ಣುಪಲ್ಲಿ' ಎಂತಲೂ, ದ್ವಾಪರಯುಗದಲ್ಲಿ ವಿರಾಟರಾಜನ ಮಗ ಶ್ವೇತನಿಂದ ನಿರ್ಮಿತವಾಗಿ 'ಪುರಿಕರ' ಎಂತಲೂ ಪ್ರಸಿದ್ಧವಾಗಿದ್ದ ಲಕ್ಷ್ಮೇಶ್ವರ ಪಟ್ಟಣದ ಪ್ರಾಚೀನತೆ ರಾಮಾಯಣ, ಮಹಾಭಾರತ ಕಾವ್ಯಗಳಿಗಿಂತಲೂ ಹಿಂದಕ್ಕೆ ಹೋಗುತ್ತದೆ. ಈ ಪಟ್ಟಣವು ಪುಲಿಗೆರೆ–300 ಆಡಳಿತ ವಿಭಾಗದ ರಾಜಧಾನಿಯಾಗಿತ್ತು. ಕಲ್ಯಾಣದ ಚಾಳುಕ್ಯರ ಮಹಾಮಂಡಳೇಶ್ವರ ಲಕ್ಷ್ಮರಸನು ಇಲ್ಲಿ ತನ್ನ ಹೆಸರಿನ ಲಕ್ಷ್ಮಣೇಶ್ವರ ದೇವಾಲಯ ನಿರ್ಮಿಸಿ, ಅದಕ್ಕೆ ಆ ರೀತಿ ನಾಮಕರಣ ಮಾಡಿದ ಕಾರಣ ಪುಲಿಗೆರೆಗೆ ಲಕ್ಷ್ಮಣೇಶ್ವರ, ಲಕ್ಷ್ಮೇಶ್ವರ ಎಂಬ ಹೆಸರು ಬಂದಿದೆ ಎಂದು ಇತಿಹಾಸ ಸಂಶೋಧಕ ಮತ್ತು ಪ್ರವಾಸಿ ಮಾರ್ಗದರ್ಶಿ ಅ.ದ. ಕಟ್ಟಿಮನಿ ಹೇಳಿದರು.



ಅವರು ಹುಲಕೋಟಿಯ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಇತಿಹಾಸ ವಿಭಾಗದ 6ನೆಯ ಸೆಮಿಸ್ಟರ್ ವಿದ್ಯಾರ್ಥಿಗಳು ಡಾ. ಅಪ್ಪಣ್ಣ ಹಂಜೆ ಅವರ ಮಾರ್ಗದರ್ಶನದಲ್ಲಿ 'ಲಕ್ಷ್ಮೇಶ್ವರದ ಇತಿಹಾಸ ಮತ್ತು ಸ್ಮಾರಕಗಳು' ಕುರಿತು ಕ್ಷೇತ್ರಕಾರ್ಯ ಅಧ್ಯಯನ ಕೈಗೊಂಡಿದ್ದ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಲಕ್ಷ್ಮೇಶ್ವರದ ಸ್ಮಾರಕಗಳ ವಾಸ್ತುಶಿಲ್ಪ ಹಿರಿಮೆಯನ್ನು ಪರಿಚಯಿಸಿದರು.

ಇಲ್ಲಿಯ ಶಂಖ ಬಸದಿ, ಅನಂತನಾಥ ತ್ರಿಕೂಟ ಬಸದಿ, ಸೋಮೇಶ್ವರ ದೇವಾಲಯ, ಹಜರತ ದೂದ ನಾನಾ ದರ್ಗಾದ ವಾಸ್ತು ಲಕ್ಷಣಗಳು, ಪ್ರಾಚೀನ ಬಾವಿಗಳು, ಪುಷ್ಕರಣಿಗಳು ಮುಂತಾದ ಲೌಕಿಕ ವಾಸ್ತು ನಿರ್ಮಾಣಗಳ ವೈಶಿಷ್ಟ್ಯಗಳು ಮತ್ತು ಸಹಸ್ರಕೂಟ, ವೃಷಭಾರೂಢ ಶಿವ–ಪಾರ್ವತಿ ಮುಂತಾದ ಅಪರೂಪ ಶಿಲ್ಪಗಳ ಪ್ರತಿಮಾ ಲಕ್ಷಣಗಳನ್ನು ವಿವರಿಸಿದರು.

## ಅಬ್ಬಿಗೇರಿ ಗ್ರಾ.ಪಂ. ಉಪಾಧ್ಯಕ್ಷರಾಗಿ ಅಕ್ಕವ್ವ ಡೊಳ್ಳಿನ ಅವಿರೋಧ ಆಯ್ಕೆ



■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಧಿಕಾರಿಗಳ ನಿರ್ದೇಶನದ ಮೇರೆಗೆ ಜೂನ್ 27 ರಂದು ಅಬ್ಬಿಗೇರಿ ಗ್ರಾಮ ಪಂಚಾಯತಿ ಉಪಾಧ್ಯಕ್ಷ ಸ್ಥಾನಕ್ಕೆ ಚುನಾವಣೆ ನಡೆಯಿತು.

ರೋಣ ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಎಸ್ ಕೆ ಇನಾಮಾದಾರ ಚುನಾವಣಾ ಪ್ರಕ್ರಿಯೆ ನಡೆಸಿದರು. ಶ್ರೀಮತಿ ಅಕ್ಕವ್ವ ಸುರೇಶ ಡೊಳ್ಳಿನ ಉಪಾಧ್ಯಕ್ಷ ಸ್ಥಾನಕ್ಕೆ ನಾಮಪತ್ರವನ್ನು ಸಲ್ಲಿಸಿದರು. ಶ್ರೀಮತಿ ರೇಖಾ ಸಂಗಮೇಶ ವಿರಾಪೂರ ಸೂಚಕರಾಗಿದ್ದರು.

ಯಾವುದೇ ಪ್ರತಿಸ್ಪರ್ಧಿ ಇಲ್ಲದೇ ಇರುವುದರಿಂದ ಶ್ರೀಮತಿ ಅಕ್ಕವ್ವ ಸುರೇಶ ಡೊಳ್ಳಿನ ಅವರನ್ನು ಅವಿರೋಧವಾಗಿ ಆಯ್ಕೆ ಎಂದು ಘೋಷಣೆ ಮಾಡಲಾಯಿತು.

ಈ ಚುನಾವಣಾ ಪ್ರಕ್ರಿಯೆಯಲ್ಲಿ 14 ಜನ ಸದಸ್ಯರು, ಸಹಾಯಕ ಚುನಾವಣಾ ಅಧಿಕಾರಿಯಾಗಿ ದೇವರಾಜ ಸಜ್ಜನಶೆಟ್ಟರ, ಅಬ್ಬಿಗೇರಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಲೋಹಿತ್ ಎಂ, ಎಚ್. ಕೆ. ದೇಸಾಯಿ ಹಾಗೂ ಸಂಗಮೇಶ ಹಡಪದ ಸೇರಿದಂತೆ ಸಿಬ್ಬಂದಿಗಳು ಹಾಜರಿದ್ದರು.

## ನವಲಗುಂದ, ಕಲಘಟಗಿಯಲ್ಲಿ ಜನಸ್ಪಂದನ ಕಾರ್ಯಕ್ರಮ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಸಾರ್ವಜನಿಕರ ದೂರು, ಅಹವಾಲುಗಳನ್ನು ಆಲಿಸಿ, ಸಾಧ್ಯವಾದಷ್ಟು ಸಮಸ್ಯೆಗಳನ್ನು ಸ್ಥಳದಲ್ಲಿಯೇ ಮತ್ತು ಉಳಿದವುಗಳನ್ನು ಕಡಿಮೆ ಕಾಲಮಿತಿಯಲ್ಲಿ ಪರಿಹರಿಸಿ, ಉತ್ತಮ ಆಡಳಿತ ನೀಡಲು ಮತ್ತು ಸರಕಾರದ ಕಲ್ಯಾಣ ಕಾರ್ಯಕ್ರಮಗಳನ್ನು ಅರ್ಹ ಫಲಾನುಭವಿಗಳಿಗೆ ಸಕಾಲದಲ್ಲಿ ತಲುಪುವಂತೆ ತಾಲೂಕು ಆಡಳಿತಗಳನ್ನು ಇನ್ನಷ್ಟು ಕ್ರಿಯಾಶೀಲಗೊಳಿಸುವ ಜಿಲ್ಲಾಧಿಕಾರಿಗಳ ಜನಸ್ಪಂದನ ಕಾರ್ಯಕ್ರಮವನ್ನು ಸರಕಾರದ ಮಾರ್ಗದರ್ಶನದಂತೆ ಧಾರವಾಡ ಜಿಲ್ಲೆಯ ಎಲ್ಲ ತಾಲೂಕುಗಳಲ್ಲಿ ಆಯೋಜಿಸಲು ಜಿಲ್ಲಾಧಿಕಾರಿ ದಿವ್ಯ ಪ್ರಭು ನಿರ್ಧರಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು, ಜೂ.28ರಂದು ಬೆಳಿಗ್ಗೆ 11 ಗಂಟೆಗೆ ನವಲಗುಂದದ ಶಿಕ್ಷಕರ ಸಹಕಾರಿ ಕಲ್ಯಾಣ ಕೇಂದ್ರದಲ್ಲಿ ನವಲಗುಂದ, ಅಣ್ಣಿಗೇರಿ ಮತ್ತು ಹುಬ್ಬಳ್ಳಿ ತಾಲೂಕಿನ ಶಿರಗುಪ್ಪಿ ಹೋಬಳಿ ಸೇರಿದಂತೆ ನವಲಗುಂದ ವಿಧಾನಸಭಾ ಮತ ಕ್ಷೇತ್ರ ವ್ಯಾಪ್ತಿಯಲ್ಲಿ ಜನಸ್ಪಂದನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜೂ. 29ರಂದು ಕಲಘಟಗಿ ತಾಲೂಕು ಮಟ್ಟದ ಜನಸ್ಪಂದನ ಕಾರ್ಯಕ್ರಮವು ಕಲಘಟಗಿ ತಾಲೂಕಿನಲ್ಲಿ ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

## ತಾಂತ್ರಿಕತೆಯ ಸದುಪಯೋಗ ಪಡೆದುಕೊಳ್ಳಲು ಕರೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇಂದು ಪ್ರತಿಯೊಂದು ಕ್ಷೇತ್ರದಲ್ಲಿ ಕಂಪ್ಯೂಟರ್ ಕಾಲಿಟ್ಟಿದ್ದು, ತಾಂತ್ರಿಕತೆ ಬೆಳೆದಂತೆ ಅದರ ಜೊತೆ ನಾವೂ ಬೆಳೆಯಬೇಕಾದ ಅವಶ್ಯಕ ಇದೆ. ಈ ನಿಟ್ಟಿನಲ್ಲಿ ರಾಜ್ಯ ಸರಕಾರ ನೋಂದಾಯಿತ ಕಟ್ಟಡ ಕಾರ್ಮಿಕರ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಸಹಕಾರ ನೀಡುವ ಉದ್ದೇಶದಿಂದ ಉಚಿತ ಲ್ಯಾಪ್‌ಟಾಪ್‌ಗಳನ್ನು ವಿತರಿಸಲಾಗುತ್ತಿದ್ದು, ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಪಟ್ಟಣದ ತಾ.ಪಂ ಸಭಾಂಗಣದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ಜನಸ್ಪಂದನ ಸಭೆಯಲ್ಲಿ ಕಾರ್ಮಿಕ ಇಲಾಖೆಯಿಂದ ಸುಮಾರು 20 ಮಕ್ಕಳಿಗೆ ಸರಕಾರದಿಂದ ನೀಡಲಾದ ಲ್ಯಾಪ್‌ಟಾಪ್‌ಗಳನ್ನು ವಿತರಿಸಿ ಮಾತನಾಡಿದರು.

ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಮಾತನಾಡಿ, ಸರಕಾರಗಳು ವಿದ್ಯಾರ್ಥಿಗಳ ಶಿಕ್ಷಣದ ಪ್ರಗತಿಗಾಗಿ ಹಲವಾರು ಯೋಜನೆಗಳನ್ನು ಜಾರಿಗೆ ತಂದಿದ್ದು, ಅದರಲ್ಲಿ ಲ್ಯಾಪ್‌ಟಾಪ್ ವಿತರಣೆಯೂ ಒಂದಾಗಿದೆ. ಇವುಗಳನ್ನು ಪಡೆದ ವಿದ್ಯಾರ್ಥಿಗಳು ಶೈಕ್ಷಣಿಕವಾಗಿ ಉತ್ತಮ ಸಾಧನೆ ಮಾಡುವ ಪ್ರಗತಿಯನ್ನು ತೋರಬೇಕು. ಲ್ಯಾಪ್‌ಟಾಪ್‌ಗಳನ್ನ ಅವರೇ ಉಪಯೋಗಿಸಿಕೊಳ್ಳುವದು ಅಷ್ಟೇ ಮುಖ್ಯವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಜಿ.ಪಂ ಕಾರ್ಯನಿರ್ವಾಹಣಾಧಿಕಾರಿ ಭರತ್ ಎಸ್., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ತಹಸೀಲ್ದಾರ ವಾಸುದೇವ ಸ್ವಾಮಿ, ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಕಾರ್ಮಿಕ ಇಲಾಖೆಯ ಉಮೇಶ ಹುಳ್ಳಣ್ಣವರ ಸೇರಿದಂತೆ ಅನೇಕರಿದ್ದರು. ಪಿಯುಸಿ, ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.90ರಷ್ಟು ಅಂಕಗಳನ್ನು ಗಳಿಸಿದ ಕಟ್ಟಡ ಕಾರ್ಮಿಕರ ಮಕ್ಕಳಿಗೆ ಲ್ಯಾಪ್‌ಟಾಪ್‌ಗಳನ್ನು ಉಚಿತವಾಗಿ ನೀಡಲಾಗುತ್ತಿದ್ದು, ಪಟ್ಟಣದಲ್ಲಿ ಒಟ್ಟು 20 ಮಕ್ಕಳು ಈ ಯೋಜನೆ ಲಾಭ ಪಡೆದರು.

## 'ಸೆಂಗೋಲ್ ಜಾಗದಲ್ಲಿ ಸಂವಿಧಾನ ಪ್ರತಿ ಇರಿಸಬೇಕು': ಸ್ಪೀಕರ್‌ಗೆ ಪತ್ರ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಲೋಕಸಭೆಯಲ್ಲಿ ಸ್ಪೀಕರ್ ಕುರ್ಚಿಯ ಪಕ್ಕದಲ್ಲಿ ಸ್ಥಾಪಿಸಲಾಗಿರುವ 'ಸೆಂಗೋಲ್' ಬದಲಿಗೆ ಸಂವಿಧಾನ ಪ್ರತಿ ಇರಿಸಬೇಕುಎ ಂದು ಆಗ್ರಹಿಸಿರು ಸಮಾಜವಾದಿ ಪಕ್ಷದ ಸಂಸದರು, "ಪ್ರಜಾಪ್ರಭುತ್ವದಲ್ಲಿ ಅದರ ಪ್ರಸ್ತುತತೆ" ಏನು ಎಂದು ಪ್ರಶ್ನಿಸಿದ್ದು, "ಬಿಜೆಪಿಯು ಭಾರತೀಯ ಸಂಸ್ಕೃತಿಯನ್ನು ಅಗೌರವಗೊಳಿಸುತ್ತಿದೆ" ಎಂದು ಆರೋಪಿಸಿದ್ದಾರೆ.

ಸಮಾಜವಾದಿ ಪಕ್ಷದ ಸಂಸದ ಆರ್‌ಕೆ ಚೌಧರಿ ಅವರು ಸ್ಪೀಕರ್ ಓಂ ಬಿರ್ಲಾ ಅವರಿಗೆ ಪತ್ರ ಬರೆದಿದ್ದು, ಸುಮಾರು 5 ಅಡಿ ಉದ್ದದ ಕರಕುಶಲ, ಚಿನ್ನದ ಲೇಪಿತ ರಾಜದಂಡದ 'ಸೆಂಗೋಲ್' ಕುರಿತು ನಡೆಯುತ್ತಿರುವ ಚರ್ಚೆ ಮತ್ತೆ ಮುನ್ನಲೆಗೆ ಬಂದಿದೆ. ಉತ್ತರ ಪ್ರದೇಶದ ಮೋಹನ್‌ಲಾಲ್‌ಗಂಜ್‌ನ ಸಂಸದರು 'ಸೆಂಗೋಲ್' ಜಾಗದಲ್ಲಿ ಸಂವಿಧಾನದ ಪ್ರತಿ ಬದಲಾಯಿಸಬೇಕು ಎಂದು ಹೇಳಿದ್ದಾರೆ.

### ಕನ್ನಡ ತೇರಿನ ಜ್ಯೋತಿ ರಥಯಾತ್ರೆಗೆ ಪಟ್ಟಣದಲ್ಲಿ ಅದ್ದೂರಿ ಸ್ವಾಗತ

# ಕನ್ನಡ ನಿತ್ಯ ನೂತನ ಭಾಷೆಯಾಗಲಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕರ್ನಾಟಕ ಸಂಭ್ರಮ 50ರ ಅಂಗವಾಗಿ ಗುರುವಾರ ಪಟ್ಟಣಕ್ಕೆ ಜ್ಯೋತಿ ರಥಯಾತ್ರೆಯನ್ನು ಗದಗ ನಾಕಾ ಬಳಿ ಅದ್ದೂರಿಯಾಗಿ ಸ್ವಾಗತಿಸಲಾಯಿತು. ಪುರಸಭೆ, ತಾಲೂಕಾಡಳಿತ, ಕನ್ನಡ ಸಾಹಿತ್ಯ ಪರಿಷತ್ತು, ಸಾಹಿತಿಗಳು, ಮುಖಂಡರು, ಶಾಲಾ-ಕಾಲೇಜು ವಿದ್ಯಾರ್ಥಿಗಳು ಆಗಮಿಸಿ ಕನ್ನಡ ತೇರಿಗೆ ಹಾರವನ್ನು ಹಾಕುವ ಮೂಲಕ ಸ್ವಾಗತಿಸಿದರು.

ಕರ್ನಾಟಕ ನಾಮಕರಣಗೊಂಡ 50ನೇ ವರ್ಷದ ಸುವರ್ಣ ಸಂಭ್ರಮದ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಸಂಚರಿಸುತ್ತಿರುವ ಕನ್ನಡ ತೇರಿನ ಜ್ಯೋತಿ ರಥಯಾತ್ರೆ ಪಟ್ಟಣಕ್ಕೆ ಆಗಮಿಸಿದಾಗ ಕನ್ನಡ ಪರ ಘೋಷಣೆಗಳನ್ನು ಕೂಗಿ ಸ್ವಾಗತಿಸಿದರು.

ಕಸಾಪ ತಾಲೂಕಾಧ್ಯಕ್ಷ ಈಶ್ವರ ಮೇಡ್ಲೇರಿ ಮಾತನಾಡಿ, ನಮ್ಮ ನಾಡಿಗೆ 1973ರಲ್ಲಿ ಕರ್ನಾಟಕ ಎಂದು ನಾಮಕರಣವಾಗಿ 50ನೇ ವರ್ಷದ ಸಂಭ್ರಮ ಮೆರೆದಿದ್ದೇವೆ. ಕನ್ನಡಿಗರ ನಾಡನ್ನು ಮೈಸೂರು ರಾಜ್ಯದಿಂದ ಕರ್ನಾಟಕ ಎಂದು ಹೆಸರಿಡಲು ಗದಗ ಜಿಲ್ಲೆಯಿಂದಲೇ ಅಭಿಯಾನ ಪ್ರಾರಂಭವಾಗಿರುವುದು ನಮ್ಮ ಹೆಮ್ಮೆ. ನಮ್ಮ ಜಿಲ್ಲೆಯವರಾದ ಆಲೂರು ವೆಂಕಟರಾವ್, ಅಂದಾನಪ್ಪ ದೊಡ್ಡಮೇಟಿಯವರಂತಹ ಮಹನೀಯರು ಕರ್ನಾಟಕ ಏಕೀಕರಣ ಚಟುವಳಿಯೊಂದಿಗೆ ರಾಜ್ಯವನ್ನು ಏಕೀಕರಿಸುವ ಕನಸು ಕಂಡರು. ಕನ್ನಡ ನಮ್ಮ ನಿತ್ಯ ನೂತನ ಭಾಷೆಯಾಗಲಿ. ಕನ್ನಡ ಭಾಷೆ-ಸಂಸ್ಕೃತಿ, ನೆಲ-ಜಲದ ಸಂರಕ್ಷಣೆಯಲ್ಲಿ ನಮ್ಮೆಲ್ಲರ ಜವಾಬ್ದಾರಿಗಳ ಆತ್ಮಾವಲೋಕನವಾಗಬೇಕಿದೆ. ಕನ್ನಡ ನಮ್ಮ ಬದುಕಿನ, ಅನ್ನದ ಭಾಷೆಯಾಗಿ ನಿತ್ಯ ಜೀವನದಲ್ಲಿ ಬಳಕೆಯಾಗಬೇಕು ಎಂದು ಹೇಳಿದರು.



ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ, ಹಿರಿಯ ಸಾಹಿತಿಗಳಾದ ಸಿ.ಜಿ. ಹಿರೇಮಠ, ಪೂರ್ಣಾಜಿ ಖರಾಟೆ, ರಮೇಶ ನವಲೆ, ಬಸವರಾಜ ಬಾಳೇಶ್ವರಮಠ, ಪುರಸಭೆ ಸದಸ್ಯೆ ಅಶ್ವಿನಿ ಅಂಕಲಕೋಟಿ, ಮುರಳೀಧರ ಹುಬ್ಬಳ್ಳಿ, ಮಂಜುನಾಥ ಚಾಕಲಬ್ಬಿ, ಈರಣ್ಣ ಗಾಣಿಗೇರ, ಡಾ. ಎಸ್.ಜಿ. ಹೂವಿನ, ಎಂ.ವಿ. ಹೂಗಾರ, ಎಸ್.ವಿ. ಕನೋಜ್, ಎಲ್.ಆರ್. ಮಲ್ಲಸಮುದ್ರ, ಸತೀಶ ಬೋಮಲೆ, ಉಮೇಶ ನೇಕಾರ, ದೇವಪ್ಪ ನಂದೆಣ್ಣವರ, ನಿಂಗಪ್ಪ ತಹಸೀಲ್ದಾರ, ಎನ್.ಎ. ಮುಲ್ಲಾ, ಸದಾನಂದ ನಂದೆಣ್ಣವರ, ಸುರೇಶ ಕೊರಡೂರ, ಮೋಹನ ನಂದೆಣ್ಣವರ, ಪಿಎಸ್‌ಐ ಈರಪ್ಪ ರಿತ್ತಿ ಸೇರಿದಂತೆ ಅನೇಕರಿದ್ದರು.

ಗದಗ ನಾಕಾದಿಂದ ಪ್ರಾರಂಭವಾದ ಮೆರವಣಿಗೆಯಲ್ಲಿ ವಿವಿಧ ಶಾಲೆಗಳ ವಿದ್ಯಾರ್ಥಿಗಳು ಕನ್ನಡ ನಾಡು-ನುಡಿಯ ಘೋಷಣಾ ಫಲಕಗಳನ್ನು ಹಿಡಿದು ದಾರಿಯುದ್ದಕ್ಕೂ ಘೋಷಣೆಗಳನ್ನು ಕೂಗುತ್ತಾ ಸಾಗಿದರು. ಚಂದನ ಶಾಲೆಯ ಮಕ್ಕಳ ಬ್ಯಾಂಡ್ ತಂಡದ ವಾದ್ಯಗಳು ಮೆರವಣಿಗೆಯ ಮೆರಗು ಹೆಚ್ಚಿಸಿದವು. ಡೊಳ್ಳು ಕುಣಿತ, ಸೂರಣಗಿಯ ಪುರವಂತ ತಂಡದವರು ಮೆರವಣಿಗೆಯಲ್ಲಿ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ ಮಾತನಾಡಿ, ಕನ್ನಡತನದ ಘಮ ಎಲ್ಲೆಡೆ ಪಸರಿಸಲು ಕನ್ನಡಿಗರೇ ಮುಂದಾಗಬೇಕಿದೆ. ಯುವಪೀಳಿಗೆ ಕನ್ನಡವನ್ನು ಪ್ರೀತಿಸಿ, ಗೌರವಿಸಬೇಕು. ಅದಕ್ಕಾಗಿ ಮನೆ-ಮನಗಳಲ್ಲಿ ಕನ್ನಡದ ಹಬ್ಬ ನಿತ್ಯೋತ್ಸವವಾಗಬೇಕು. ಕನ್ನಡ ಕೇವಲ ಭಾಷೆಯಲ್ಲ, ಅದೊಂದು ವಿಶಿಷ್ಟ ಸಂಸ್ಕೃತಿ, ಹಲವು ಒಳಿತು, ಶ್ರೇಷ್ಠತೆಗಳ ಸಂಗಮವೇ ಆಗಿದೆ ಎಂದರು.



### ಗ್ರೇನ್ ಮಾರ್ಕೆಟ್ ವ್ಯಾಪಾರಸ್ಥರಿಂದ ಅಕ್ಬರ್‌ಸಾಬ ಬಬರ್ಚಿಯವರಿಗೆ ಸನ್ಮಾನ

# ಅವಳಿ ನಗರದ ಅಭಿವೃದ್ಧಿಗೆ ಶ್ರಮಿಸುವೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರವನ್ನು ಸುಂದರಗೊಳಿಸಲು ನಗರಾಭಿವೃದ್ಧಿ ಪ್ರಾಧಿಕಾರ ಶ್ರಮಿಸಲಿದ್ದು, ಸಾರ್ವಜನಿಕರು ಸಲಹೆ-ಸೂಚನೆಯೊಂದಿಗೆ ಸಹಕಾರ ನೀಡಬೇಕೆಂದು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ ಬಬರ್ಚಿ ಹೇಳಿದರು.




ಅವರು ಗುರುವಾರ ಗದಗ ಗ್ರೇನ್ ಮಾರುಕಟ್ಟೆಯಲ್ಲಿ ಹಣ್ಣು, ಹೂವು ಎಲೆ ಹಾಗೂ ಇತರೆ ಕಿರುಕೂಳ ವ್ಯಾಪಾರಸ್ಥರ ಸಂಘ ನಗರಾಭಿವೃದ್ಧಿ ಪ್ರಾಧಿಕಾರದ ನೂತನ ಅಧ್ಯಕ್ಷರಾದ ಹಿನ್ನೆಲೆಯಲ್ಲಿ ಏರ್ಪಡಿಸಿದ್ದ ಸನ್ಮಾನ ಸ್ವೀಕರಿಸಿ ಔಪಚಾರಿಕವಾಗಿ ಮಾತನಾಡಿದರು.

ನಗರಾಭಿವೃದ್ಧಿ ಪ್ರಾಧಿಕಾರದ ಆಡಳಿತ ವ್ಯಾಪ್ತಿಯಲ್ಲಿ ಮಾಡಬಹುದಾದ ನಗರಾಭಿವೃದ್ಧಿ ಕಾರ್ಯ ಯೋಜನೆಗಳನ್ನು ಅನುಷ್ಠಾನಗೊಳಿಸಿ ಅವಳಿ ನಗರದ ಅಭಿವೃದ್ಧಿಗೆ ಶ್ರಮಿಸುವದಾಗಿ ಹೇಳಿದರು.

ಸಂಘದ ಅಧ್ಯಕ್ಷ ಅಬ್ದುಲ್‌ರೆಹಮಾನ ಹುಯಿಲಗೋಳ ಮಾತನಾಡಿ, ಸಂಘದ ಕಾರ್ಯಾಲಯಕ್ಕಾಗಿ ನಿವೇಶನ ಅವಶ್ಯವಿದ್ದು, ಈ ಕುರಿತು ಹಿಂದಿನ ಈರ್ವರು ಅಧ್ಯಕ್ಷರಿಗೆ ಹಾಗೂ ಪ್ರಾಧಿಕಾರದ ಆಯುಕ್ತರಿಗೆ ಮನವಿ ಸಲ್ಲಿಸಲಾಗಿತ್ತು. ಈ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಬೇಕೆಂದರು.

ಈ ಬಗ್ಗೆ ಪ್ರಾಧಿಕಾರದ ನಿಯಮಗಳಿಗೆ ಒಳಪಟ್ಟು ಕಾನೂನು ಅನ್ವಯ ಅವಕಾಶ ನೋಡಿಕೊಂಡು ಪರಾಮರ್ಶಿಸಲಾಗುವದು ಎಂದು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್‌ಸಾಬ ಬಬರ್ಚಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಸಂಘದ ಗೌರವ ಅಧ್ಯಕ್ಷ ಶರಣಪ್ಪ ಸಾಸನೂರ, ಉಪಾಧ್ಯಕ್ಷ ರಾಜೇಸಾಬ ಅಡರಕಟ್ಟಿ, ಕಾರ್ಯದರ್ಶಿ ಶರಣು ಶಿಗ್ಲಿ, ಸಹಕಾರ್ಯದರ್ಶಿ ಮೇಹರ್‌ಅಲಿ ಢಾಲಾಯತ, ಸದಸ್ಯರಾದ ಎ.ಎನ್. ಅನ್ಸಾರಿ, ರಿಯಾಜ ಅನ್ವರ್ ಖಾಜಿ, ವಿಜಯಕುಮಾರ ಬಾಗಮಾರ, ಗಣಪತಿ ಪಟಗೆ, ವೆಂಕಟರಮನ್ ಗುತ್ತಲ, ಮಹ್ಮದ್‌ಅಲಿ ರೋಣ, ಅಶ್ರಫ್‌ಅಲಿ ನಸಬಿ, ಅಜ್ಜಣ್ಣ ಮುಧೋಳ, ಪಿ.ಎಸ್. ಅರಸಿದ್ದಿ, ಅಶೋಕ ಭಾಂಡಗೆ, ಪರವೇಜ್ ಬೇಲೇರಿ, ತಿಪ್ಪಣ್ಣ ನೋನಾರೆ, ಮಹ್ಮದ್‌ಅಲಿ ತಂಬಾಕದ, ಮಂಜು ಲಕ್ಕುಂಡಿ, ಯಲ್ಲವ್ವ ಉಳ್ಳಿಕಾಶಿ ಮುಂತಾದವರಿದ್ದರು.

# ಅಂಕ ಗಳಿಕೆಯಷ್ಟೇ ಮಾನದಂಡವಲ್ಲ

■ ವಿಜಯಸಾಕ್ಷಿ ಸುದ್ದಿ, ಹುಲಕೋಟಿ




ವಿದ್ಯಾರ್ಥಿಗಳು ಕಾಲೇಜು ಹಂತದಲ್ಲಿ ನಡೆಯುವ ಎಲ್ಲ ಕಾರ್ಯಕ್ರಮಗಳಲ್ಲಿ ಸ್ವಪ್ರೇರಣೆಯಿಂದ ಭಾಗವಹಿಸಿ ಯಶಸ್ಸನ್ನು ಹೊಂದಬೇಕೆಂದು ಬಾಗಲಕೋಟೆಯ ಹೇಮ-ವೇಮ ಸಂಸ್ಥೆಯ ಸಂಪನ್ಮೂಲ ವ್ಯಕ್ತಿಗಳಾದ ಮೋಹನ ದೇಶಪಾಂಡೆ ಹೇಳಿದರು.

ಸ್ಥಳೀಯ ಸ್ವಾಮಿ ವಿವೇಕಾನಂದ ಪದವಿಪೂರ್ವ ವಿಜ್ಞಾನ ಮಹಾವಿದ್ಯಾಲಯದಲ್ಲಿ ನಡೆದ ಸಾಂಸ್ಕೃತಿಕ ಹಾಗೂ ಕ್ರೀಡಾ ಚಟುವಟಿಕೆಗಳ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕಾಂ್ಯರ್ಕ್ರವ್ಂದ' ಅಧ್ಯಕ್ಷತೆ ವಹಿಸಿದ್ದ ಕೆ.ಎಚ್. ಪಾಟೀಲ ಸೆಂಟರ್ ಫಾರ್ ಹ್ಯೂಮನ್ ಎಕ್ಸಲನ್ಸ್ ಸ್ವಾಮಿ ವಿವೇಕಾನಂದ ಕಾಲೇಜಿನ ಅಧ್ಯಕ್ಷ ಡಾ. ಎಸ್.ಆರ್. ನಾಗನೂರ ಮಾತನಾಡಿ, ಸಹಪಠ್ಯ ಚಟುವಟಿಕೆಗಳು ನಮ್ಮ ಒತ್ತಡವನ್ನು ನಿವಾರಣೆ ಮಾಡಲು ಸಹಕಾರಿ. ಅಲ್ಲದೇ ಅಂಕ ಗಳಿಕೆಯಷ್ಟೇ ವಿದ್ಯಾರ್ಥಿಗಳ ಮಾನದಂಡವಲ್ಲ. ನಮ್ಮ ಪರಿಸರ, ಸಂಬಂಧಿಕರ ಕುರಿತು ಆಲೋಚನೆಗಳನ್ನು ಮಾಡಿ ಸಮುದಾಯದ ಸಮಸ್ಯೆಗಳನ್ನು ಪರಿಹರಿಸಲು ಮುಂದಾಗಬೇಕೆಂದರು.

ಅನುಷಾ ಹೊನ್ನನಾಯ್ಕರ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಶ್ರೀರಕ್ಷಾ ಕುಲಕರ್ಣಿ ಹಾಗೂ ಸಂಗಡಿಗರು ನಾಡಗೀತೆ ಹಾಡಿದರು. ಕುಮಾರ ಲಕ್ಷ್ಮೀನಾರಾಯಣ ಸ್ವಾಗತಿಸಿದನು. ರೋಜಾ ಕಾತರಕಿ ಆತಿಥಿಗಳನ್ನು ಪರಿಚಯಿಸಿದರು.

ಕಾಲೇಜಿನ ಕ್ರೀಡಾ ಚಟುವಟಿಕೆಗಳ ಮುಖ್ಯಸ್ಥರಾದ ಉಪನ್ಯಾಸಕಿ ಸಂಧ್ಯಾ ಗಂಗಾವತಿ ಎಲ್ಲಾ ಕ್ಯಾಪ್ಟನ್‌ಗಳಿಗೆ ಕ್ರೀಡಾ ಚಟುವಟಿಕೆಗಳ ಪ್ರತಿಜ್ಞಾವಿಧಿ ಬೋಧಿಸಿದರು. ಸಾಂಸ್ಕೃತಿಕ ಚಟುವಟಿಕೆಗಳ ಮುಖ್ಯಸ್ಥರಾದ ಉಪನ್ಯಾಸಕಿ ಜಯಶ್ರೀ ಹೊಳೆಯಣ್ಣವರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕೆ.ಎಚ್. ಪಾಟೀಲ ಸೆಂಟರ್ ಫಾರ್ ಹ್ಯೂಮನ್ ಎಕ್ಸಲನ್ಸ್ ಸಂಸ್ಥೆಯ ನಿರ್ದೇಶಕ ಆರ್. ಆರ್. ಸಾವಕಾರ, ನಿವೃತ್ತ ಎಕ್ಸಿಕ್ಯೂಟಿವ್ ಇಂಜಿನಿಯರ್ ಸಿ.ಎಚ್. ಕಟಗೇರಿ ಸೇರಿದಂತೆ ಉಪನ್ಯಾಸಕರು ಹಾಜರಿದ್ದರು. ಶ್ರೀತನು ಅಂಗಡಿ, ಮಿಥುನ ಜಿನಗಿ ಕಾರ್ಯಕ್ರಮ ನಿರೂಪಿಸಿದರು. ಸುಷ್ಮಾ ಪೂಜಾರ ವಂದಿಸಿದರು.

## ಸಚಿವ ಡಾ. ಎಚ್.ಕೆ. ಪಾಟೀಲರಿಗೆ ಅಭಿನಂದನೆ

■ ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯದ ಪ್ರವಾಸಿ ತಾಣಗಳನ್ನು ಅಭಿವೃದ್ಧಿಗೊಳಿಸಿ ಪ್ರವಾಸೋದ್ಯಮ ಖಾತೆಯನ್ನು ಯಶಸ್ವಿಯಾಗಿ ನಿವಹಿಸುತ್ತಿರುವ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲರನ್ನು ಜಿಲ್ಲೆಯ ಜನತೆಯ ಪರವಾಗಿ ಹುಲಕೋಟಿ ಗ್ರಾ.ಪಂ ಮಾಜಿ ಅಧ್ಯಕ್ಷ ಹಾಸೀಮಸಾಬ ತಹಸೀಲ್ದಾರ ಅಭಿನಂದಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ರಾಜ್ಯದಲ್ಲಿ ಪ್ರಥಮ ಬಾರಿಗೆ ದಕ್ಷಿಣ ಭಾರತದ ಉತ್ಸವ ಸಂಘಟಿಸಿದ ಖ್ಯಾತಿಯ ಪ್ರವಾಸೋದ್ಯಮ ಸಚಿವ ಡಾ. ಎಚ್.ಕೆ. ಪಾಟೀಲರು ರಾಜ್ಯದ ಪ್ರವಾಸಿ ತಾಣಗಳನ್ನು ಅಭಿವೃದ್ಧಿಪಡಿಸುವ ಜೊತೆಗೆ ಪ್ರವಾಸೋದ್ಯಮದ ಮೂಲಕ ರಾಜ್ಯವನ್ನು ಪ್ರಬಲವಾಗಿ ಬೆಳೆಸುವ ಉದ್ದೇಶದಿಂದ 2 ದಿನಗಳ ಕಾಲ ಬೆಂಗಳೂರಿನ ಅರಮನೆ ಮೈದಾನದಲ್ಲಿ ದಕ್ಷಿಣ ಭಾರತದ ಉತ್ಸವವನ್ನು ಯಶಸ್ವಿಯಾಗಿ ಸಂಘಟಿಸಿ, ರಾಜ್ಯದಲ್ಲಿ 3750 ಕೋಟಿ ರೂಗಳನ್ನು ಹೂಡಿಕೆ ಮಾಡುವಲ್ಲಿ ಯಶಸ್ಸು ಕಂಡಿದ್ದಾರೆ.

ಸಚಿವ ಎಚ್.ಕೆ. ಪಾಟೀಲರ ಈ ಉತ್ಸವದಿಂದಾಗಿ ದಕ್ಷಿಣ ರಾಜ್ಯಗಳ ವೈವಿಧ್ಯವನ್ನು ಮಂಡಿಸಿ ಪ್ರವಾಸೋದ್ಯಮಕ್ಕೆ ಉತ್ತೇಜನದ ಪ್ರೇರಣೆ ಸಿಗಲಿದೆ. ಈ ಉತ್ಸವದ ಯೋಜನಾ ವರದಿಯಲ್ಲಿ ಮಂಗಳೂರು, ಉಡುಪಿ, ಸವದತ್ತಿಯ ರೇಣುಕಾ ಯಲಲಮ್ಮದೇವಿ, ಚಾಮುಂಡೇಶ್ವರಿ, ಹುಲಿಗೆಮ್ಮ, ಹೊಳಲಮ್ಮ, ಬದಾಮಿಯ ಬನಶಂಕರಿ, ಗಾಣಗಾಪೂರದ ದತ್ತಮಂದಿರ, ಬೀದರ, ಕೂಡಲಸಂಗಮ ಸೇರಿದಂತೆ ಹಲವು ಪವಿತ್ರ ಸ್ಥಳಗಳಲ್ಲಿ ಮೂಲಭೂತ ಸವಲತ್ತು ಪಡೆಯುವ ಸಾಲಿನಲ್ಲಿವೆ. ಈ ಕೆಲಸದ ಮೂಲಕ ರಾಜ್ಯವನ್ನು ವಿಶ್ವಕ್ಕೆ ಪರಿಚಯಿಸಲಿರುವ ಪ್ರವಾಸೋದ್ಯಮ ಡಾ. ಎಚ್.ಕೆ. ಪಾಟೀಲರನ್ನು ಅಭಿನಂಧಿಸಿದ್ದಾರೆ.

## ಸಿಬಿಐನಿಂದ ದೆಹಲಿ ಸಿಎಂ ಬಂಧನ: 'ಇದು ಸರ್ವಾಧಿಕಾರ'

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ಸಿಬಿಐ ಕಸ್ಟಡಿ ಆದೇಶವನ್ನು ದೆಹಲಿ ನ್ಯಾಯಾಲಯವು ಕಾಯ್ದಿರಿಸಿದ ನಂತರ, ಅವರ ಪತ್ನಿ ಸುನೀತಾ ಬುಧವಾರ ಇಡೀ ವ್ಯವಸ್ಥೆಯು ತನ್ನ ಪತಿ ಜೈಲಿನಿಂದ ಹೊರಬರದಂತೆ ನೋಡಿಕೊಳ್ಳಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದರು; ಇದೆಲ್ಲವೂ 'ಸರ್ವಾಧಿಕಾರ' ಮತ್ತು 'ತುರ್ತು ಪರಿಸ್ಥಿತಿ' ಎಂದು ಹೇಳಿದ್ದಾರೆ.

ಅಬಕಾರಿ ನೀತಿ ಸಂಬಂಧಿತ ಮನಿ ಲಾಂಡರಿಂಗ್ ಪ್ರಕರಣದಲ್ಲಿ ಜೂನ್ 20 ರಂದು ತನ್ನ ಪತಿಗೆ ಜಾಮೀನು ಸಿಕ್ಕಿದೆ ಮತ್ತು ಜಾರಿ ನಿರ್ದೇಶನಾಲಯವು (ಇಡಿ) ತಕ್ಷಣವೇ ತಡೆಯಾಜ್ಞೆ ನೀಡಿದೆ ಎಂದು ತಮ್ಮ ಎಕ್ಸ್ ಪೋಸ್ಟ್‌ನಲ್ಲಿ ಸುನೀತಾ ಹೇಳಿದ್ದಾರೆ.

### ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ

ಪಿನ್ ಕೋಡ್ ನಂ. 582101. ದೂರವಾಣಿ: 08372-278003.
ಇ ಮೇಲ್: uda_gadag@hotmail.com

ಸಂ: ನಅಪ್ರಾಗಬೆ/ಟಿ.ಪಿ.ಎಮ್/ಭೂಬ-/2024-25/227 ದಿನಾಂಕ: 27-6-2024

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ ಶ್ರೀ. ಶ್ರೀಕಾಂತ.ಬಿ.ಕಬಾಡಿ ಹಾಗೂ ಶ್ರೀಮತಿ. ರೂಪಾ.ವಿ.ಕಬಾಡಿ ಹಾಗೂ ಶ್ರೀಮತಿ. ಅನುಪಮಾ.ಎಲ್.ಕಬಾಡಿ ಈ ಕೆಳಕಂಡ ಜಮೀನನ್ನು ಭೂ ಉಪಯೋಗ ಬದಲಾವಣೆ ಮಾಡಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ಬದಲಾವಣೆಯಿಂದ ಸ್ಥಳದಲ್ಲಿ ವಸತಿ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ಹಾಗೂ ಸಾರ್ವಜನಿಕರಿಗೆ ವಸತಿ ನಿವೇಶನಗಳು ಸಿಗುತ್ತವೆ. ಇದರಿಂದ ನಗರದಲ್ಲಿ ವಸತಿ ಸಮಸ್ಯೆ ಸ್ವಲ್ಪ ಬಗೆಹರಿಯುತ್ತದೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 14(ಎ) ರಂತೆ ಭೂ ಉಪಯೋಗ ಬದಲಾವಣೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ 15 (ಹದಿನೈದು) ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 01 | ಬೆಟಗೇರಿ | 47/*/2ಕ<br>47/*/2ಡ<br>47/*/2ಇ | 2ಎಕರೆ-05ಗುಂಟೆ<br>2ಎಕರೆ-05ಗುಂಟೆ<br>4ಎಕರೆ-05ಗುಂಟೆ<br>ಒಟ್ಟು ಕ್ಷೇತ್ರ: 8ಎಕರೆ-15ಗುಂಟೆ | ಕೃಷಿ | ವಸತಿ |

ವಾ.ಸಾ.ಇ/ಗದಗ/40/2024-25/ದೇಶಪಾಂಡೆಪಬ್ಲಿಸಿಟಿ

ಸಹಿ/- ಆಯುಕರು
ನಗರಾಭಿವೃದ್ಧಿ ಪ್ರಾಧಿಕಾರ, ಗೆದಗ-ಬೆಟಗೇರಿ

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka